ವಿಜಯಪುರ | ಸಂಪುಟ 04 | ಸಂಚಿಕೆ 153 | ಪುಟ 04 | ₹ 3.00
https://udayarashminews.com
udayarashmi 90088 88340


# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಆಗಸ್ಟ್, 08, 2026

"ಕೆಲವರನ್ನು ಸಮಾಧಾನಪಡಿಸಲಾಗಿದೆ. ಇನ್ನೂ ಕೆಲವರೊಂದಿಗೆ ಸಂಧಾನ ನಡೆಯುತ್ತಿದೆ. ಕೃಷ್ಣಪ್ಪ ಅವರು ಒಕ್ಕಲಿಗರು. ಅವರನ್ನು ಸಂಪುಟದೊಳಗೆ ಸೇರಿಸಲು ನಾನು ರಾಜೀನಾಮೆಗೂ ಸಿದ್ಧ. ಪಕ್ಷ ಹೇಳಿದರೆ ತ್ಯಾಗಕ್ಕೆ ಸಿದ್ಧವಿದ್ದೇನೆ, ನನ್ನ ಸ್ಥಾನ ಅವರಿಗೆ ಕೊಡ್ತಾರೆ ಎಂದರೆ ನನಗೆ ಅಭ್ಯಂತರ ಇಲ್ಲ."



■ ಎಚ್.ಸಿ.ಬಾಲಕೃಷ್ಣ
ಸಚಿವರು

# ಆ. 14ಕ್ಕೆ ಸಭಾಪತಿ ಆಯ್ಕೆ: ಸಿಎಂ

## ವಿಧಾನ ಪರಿಷತ್‌ನ ಸಭಾಪತಿ ಸ್ಥಾನಕ್ಕೆ ಬಸವರಾಜ ಹೊರಟ್ಟಿ ರಾಜೀನಾಮೆ | ಹೊರಟ್ಟಿ ಕಾರ್ಯ ಶ್ಲಾಘಿಸಿದ ಮುಖ್ಯಮಂತ್ರಿ




ಬೆಂಗಳೂರು: ಸಾಕಷ್ಟು ರಾಜಕೀಯ ಬೆಳವಣಿಗೆಗಳ ಬಳಿಕ ಕೊನೆಗೂ ಕರ್ನಾಟಕ ವಿಧಾನ ಪರಿಷತ್‌ನ ಸಭಾಪತಿ ಸ್ಥಾನಕ್ಕೆ ಬಸವರಾಜ ಹೊರಟ್ಟಿ ರಾಜೀನಾಮೆ ನೀಡಿದ್ದಾರೆ. ಸಿಎಂ ಡಿಕೆಶಿ, ಕೆಪಿಸಿಸಿ ಅಧ್ಯಕ್ಷರ ಸುದೀರ್ಘ ಮನವೊಲಿಕೆ ಬಳಿಕ ಅವರು ಹುದ್ದೆ ತೊರೆದಿದ್ದು, ಸ್ವಇಚ್ಛೆಯಿಂದ ರಾಜೀನಾಮೆ ಎಂದು ಪತ್ರದಲ್ಲಿ ಉಲ್ಲೇಖ ಮಾಡಿದ್ದಾರೆ.

ಹೊರಟ್ಟಿಯವರ ರಾಜೀನಾಮೆಯನ್ನು ಕ್ಷಣದಲ್ಲಿಯೇ ಅಂಗೀಕರಿಸಲಾಗಿದ್ದು ನೂತನ ಸಭಾಪತಿಗಳನ್ನು ಆಯ್ಕೆ ಮಾಡುವವರೆಗೆ ಅವರೇ ಹಂಗಾಮಿ ಸಭಾಪತಿಯಾಗಿ ಮುಂದುವರಿಯಬೇಕೆಂದು ಮನವಿ ಮಾಡಿಕೊಳ್ಳುವುದಾಗಿ ಸಿಎಂ ಡಿ ಕೆ ಶಿವಕುಮಾರ್ ತಿಳಿಸಿದ್ದಾರೆ.

ಬಸವರಾಜ ಹೊರಟ್ಟಿ ಅವರು ವಿಧಾನ ಪರಿಷತ್ ಸಭಾಪತಿ ಸ್ಥಾನವನ್ನು ಅತ್ಯಂತ ಘನತೆಯಿಂದ ನಿಭಾಯಿಸಿಕೊಂಡು ಬಂದಿದ್ದಾರೆ. ಆ ಹುದ್ದೆಗೆ ಅವರು ನೀಡಿದಷ್ಟು ಗೌರವವನ್ನು ಬೇರೆ ಯಾರೂ ನೀಡಿಲ್ಲ. ಹಾಗಾಗಿ, ನಾವು ಸಹ ಅವರಿಗೆ ಅಷ್ಟೇ ಆದರದಿಂದ ಬೀಳ್ಕೊಡುಗೆ ನೀಡಲಿದ್ದೇವೆ. ಎಲ್ಲಾ ಪರಿಷತ್ ಸದಸ್ಯರಿಗೂ ಕೃತಜ್ಞತೆ ಸಲ್ಲಿಸಿ, ಸೌಹಾರ್ದಯುತವಾಗಿ ರಾಜೀನಾಮೆ ನೀಡುವುದು ಅವರ ಆಸೆಯಾಗಿದೆ. ಅವರ ಈ ಭಾವನೆಯನ್ನು ನಾವು ಸಂಪೂರ್ಣ ಗೌರವಿಸುತ್ತೇವೆ ಎಂದು ಹೇಳಿದ್ದಾರೆ.

ಆಗಸ್ಟ್ 14ರಂದು ಬೆಳಗ್ಗೆ ಉಪ ಸಭಾಪತಿಗಳ ಆಯ್ಕೆ ಹಾಗೂ ಸಾಯಂಕಾಲ ವಿಧಾನಪರಿಷತ್ ಸಭಾಪತಿಗಳ ಆಯ್ಕೆ ನಡೆಯಲಿದೆ ಎಂದರು.

### ಸಭಾಪತಿ ಸ್ಥಾನಕ್ಕೆ ಹೊರಟ್ಟಿ ರಾಜೀನಾಮೆ



ಬೆಂಗಳೂರು: ಹಿರಿಯ ರಾಜಕಾರಣಿ ಹಾಗೂ ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಅವರು ಶುಕ್ರವಾರ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.

ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ರಾಜೀನಾಮೆ ನೀಡುವಂತೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಹೊರಟ್ಟಿ ಈ ನಿರ್ಧಾರ ಕೈಗೊಂಡಿದ್ದಾರೆ ಎಂದು ತಿಳಿದುಬಂದಿದೆ.

75 ಸದಸ್ಯ ಬಲದ ಕರ್ನಾಟಕ ವಿಧಾನ ಪರಿಷತ್‌ನಲ್ಲಿ ಕಾಂಗ್ರೆಸ್ ಸ್ಪಷ್ಟ ಬಹುಮತ ಪಡೆದಿರುವ ಹಿನ್ನೆಲೆಯಲ್ಲಿ, ಸಭಾಪತಿ ಮತ್ತು ಉಪಸಭಾಪತಿ ಎರಡೂ ಹುದ್ದೆಗಳನ್ನು ತನ್ನ ವಶಕ್ಕೆ ಪಡೆಯಲು ಆಡಳಿತಾರೂಢ ಕಾಂಗ್ರೆಸ್ ಮುಂದಾಗಿದೆ. ಈ ರಾಜಕೀಯ ಬೆಳವಣಿಗೆಯ ನಡುವೆಯೇ ಬಸವರಾಜ ಹೊರಟ್ಟಿ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ.

ಈ ಮೊದಲು ಮುಂಗಾರು ಅಧಿವೇಶನ ಆರಂಭವಾದ ಬಳಿಕ ಅಂದರೆ ಆಗಸ್ಟ್ 14 ರಂದು ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡಲು ಬಸವರಾಜ ಹೊರಟ್ಟಿ ತೀರ್ಮಾನಿಸಿದ್ದರು.

ಈಗ ಯಾವುದೇ ಒತ್ತಡವಿಲ್ಲದೆ, ಸಂಪೂರ್ಣ ಸ್ವಇಚ್ಛೆಯಿಂದಲೇ ತಾವು ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡಿರುವುದಾಗಿ ಹೊರಟ್ಟಿ ರಾಜೀನಾಮೆ ಪತ್ರದಲ್ಲಿ ತಿಳಿಸಿದ್ದಾರೆ. ನೂತನ ಸಭಾಪತಿ ಆಯ್ಕೆಯಾಗುವವರೆಗೆ ಬಸವರಾಜ ಹೊರಟ್ಟಿ ಅವರೇ ಹಂಗಾಮಿ ಸಭಾಪತಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

# ಪತ್ರಕರ್ತರ 400 ಅರ್ಜಿಗಳಿಗೆ ವಾರ್ತಾ ಇಲಾಖೆ ಅಸ್ತು

■ ಉದಯರಶ್ಮಿ ದಿನಪತ್ರಿಕೆ



### ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಯೋಜನೆ | ಕೆಯುಡಬ್ಲ್ಯೂಜೆ ಸ್ವಾಗತ | ವಾರ್ತಾ ಇಲಾಖೆ ಆಯುಕ್ತರಿಗೆ ಸನ್ಮಾನ

ಬೆಂಗಳೂರು: ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡುವ ಯೋಜನೆಯಡಿ, ದಾಖಲೆಗಳ ಸಹಿತ ಅರ್ಜಿ ಸಲ್ಲಿಸಿದ್ದ ಸುಮಾರು 400 ಪತ್ರಕರ್ತರ ಬಸ್ ಪಾಸ್‌ಗಳಿಗೆ ವಾರ್ತಾ ಇಲಾಖೆ ಅನುಮೋದನೆ ನೀಡಿದೆ.

ವಾರ್ತಾ ಇಲಾಖೆ ಆಯುಕ್ತರಾದ ಎಂ.ಎನ್. ಅನುಚೇತ್ ಅವರ ಅಧ್ಯಕ್ಷತೆಯಲ್ಲಿ ನಡೆದ ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ಕಮಿಟಿ ಸಭೆಯಲ್ಲಿ ಈ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ನಿರಂತರವಾಗಿ ನಡೆಸಿದ ಹೋರಾಟ ಮತ್ತು ಒತ್ತಾಯದ ಫಲವಾಗಿ, ಒಂದೇ ಹಂತದಲ್ಲಿ ಇಷ್ಟು ದೊಡ್ಡ ಪ್ರಮಾಣದಲ್ಲಿ ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ಮಂಜೂರು ಮಾಡಿರುವುದು ಇದೇ ಮೊದಲ ಬಾರಿ ಎನ್ನುವುದು ಸ್ವಾಗತಾರ್ಹ.

ಗ್ರಾಮೀಣ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರ ಬಹುದಿನಗಳ ಬೇಡಿಕೆಗೆ ಸ್ಪಂದಿಸಿ, ದಾಖಲೆಗಳನ್ನು ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಿರುವ ವಾರ್ತಾ ಇಲಾಖೆಗೆ ಕೆಯುಡಬ್ಲ್ಯೂಜೆ ಕೃತಜ್ಞತೆ ಸಲ್ಲಿಸಿದೆ.

ಇದೇ ವೇಳೆ, ಇನ್ನೂ ಬಸ್ ಪಾಸ್‌ಗೆ ಅರ್ಜಿ ಸಲ್ಲಿಸದಿರುವ ಅರ್ಹ ಗ್ರಾಮೀಣ ಪತ್ರಕರ್ತರು ನಿಯಮಾವಳಿಯಂತೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವಂತೆ ಕೆಯುಡಬ್ಲ್ಯೂಜೆ ಮನವಿ ಮಾಡಿದೆ.

ಇದೇ ಸಂದರ್ಭದಲ್ಲಿ ವಾರ್ತಾ ಇಲಾಖೆ ಆಯುಕ್ತರನ್ನು ಸನ್ಮಾನಿಸಲಾಯಿತು.

ವಾರ್ತಾ ಇಲಾಖೆ ಉಪ ನಿರ್ದೇಶಕ ಗುರುನಾಥ್ ಕಡಬೂರು ಹಾಜರಿದ್ದರು.

ಸಭೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಸದಸ್ಯರಾದ ಶ್ರೀನಿವಾಸ ನಾಯಕ ಇಂಡಾಜೆ, ಚಂದ್ರು, ಮೋಹನ, ಸುರೇಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ದ್ವಿಭಾಷಾ ನೀತಿ ಕನ್ನಡ ಭಾಷೆ ಉಳಿವಿಗೆ ಮಾರಕ : ಕುಲಕರ್ಣಿ



■ ಉದಯರಶ್ಮಿ ದಿನಪತ್ರಿಕೆ

### ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ಶಿಕ್ಷಣ ನೀತಿ ಮತ್ತು ಶಿಕ್ಷಕರ ನೇಮಕಾತಿ ಅಧಿಸೂಚನೆಗೆ ವಿರೋಧ | ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಜಿಲ್ಲಾಧಿಕಾರಿಗೆ ಮನವಿ

ವಿಜಯಪುರ: ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ಶಿಕ್ಷಣ ನೀತಿ ಮತ್ತು ಶಿಕ್ಷಕರ ನೇಮಕಾತಿ ಅಧಿಸೂಚನೆ ವಿರೋಧಿಸಿ ಅಖಿಲ ಭಾರತೀಯ ಸಾಹಿತ್ಯ ಪರಿಷದ್(ನೋಂ) ವಿಜಯಪುರ ಜಿಲ್ಲಾ ಸಮಿತಿಯಿಂದ ಶುಕ್ರವಾರ ದಿನಾಂಕ 7 ಅಗಸ್ಟ್ ರಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಭಾಸಾಪ ಸಹ ಕಾರ್ಯದರ್ಶಿ ಮಯೂರಕುಮಾರ ತಿಳಗೂಳಕರ ಅವರು, "ಕರ್ನಾಟಕ ಸರ್ಕಾರವು ಸರ್ಕಾರಿ ಶಾಲೆಗಳಲ್ಲಿ ಐದನೆಯ ತರಗತಿಯವರೆಗೆ ಜಾರಿಗೊಳಿಸಿರುವ ದ್ವಿಭಾಷಾ ಶಿಕ್ಷಣ ನೀತಿಯಿಂದ ಉಂಟಾಗಿರುವ ಸಮಸ್ಯೆಗಳ ಕುರಿತು ವಿವರಿಸಿದರು.

ಈಗ ಶಾಲಾ ಶಿಕ್ಷಣ ಇಲಾಖೆಯು ಹದಿನೈದು ಸಾವಿರ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ನಿರೀಕ್ಷರ ಕರಡು ಅಧಿಸೂಚನೆಯನ್ನು ಹೊರಡಿಸಿದ್ದು, ಅದರಲ್ಲಿ ಕನ್ನಡ ಶಿಕ್ಷಕರ ನೇಮಕಾತಿಯನ್ನೇ ಕೈಬಿಡಲಾಗಿದೆ. ಅಲ್ಲದೆ ವಿಜ್ಞಾನ, ಗಣಿತ ಸೇರಿದಂತೆ ಎಲ್ಲಾ ವಿಷಯಗಳ ಶಿಕ್ಷಕರ ನೇಮಕಾತಿಗೆ ಆಂಗ್ಲಭಾಷಾ ಪ್ರೌಢಿಮೆಯನ್ನು ಕಡ್ಡಾಯಗೊಳಿಸಲಾಗಿದೆ ಎಂದು ತಿಳಿಸಿದರು.

ಅಭಾಸಾಪ ಜಿಲ್ಲಾಧ್ಯಕ್ಷ ವಿವೇಕ ಕುಲಕರ್ಣಿ ಮಾತನಾಡಿ 'ಸರ್ಕಾರ ದ್ವಿಭಾಷಾ ನೀತಿಯು ಕನ್ನಡ ಭಾಷೆಯ ಉಳಿವಿಗೆ ಮಾರಕವಾಗಿದೆ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಆನಂದ ಗೋಡ್ಸೆ, ವಿಭಾಗ ಸಂಯೋಜಕ ಶ್ರೀರಂಗ ಪುರಾಣಿಕ, ಕಾರ್ಯದರ್ಶಿ ಸುಕಾಂತ ಕುಲಕರ್ಣಿ, ಸಹ ಕಾರ್ಯದರ್ಶಿ ಅನೀಲ ಬೆಳುಂಡಗಿ, ಸದಸ್ಯರಾದ ಭಾರತಿ ಗೋಡ್ಸೆ ಹಾಗೂ ದಾನೇಶ್ವರಿ ಅಲ್ಲಾಳೆ ಉಪಸ್ಥಿತರಿದ್ದರು.

# ಮಹಿಳಾ ವಿವಿಗಳ ಮಧ್ಯೆ ಶೈಕ್ಷಣಿಕ ಸೇತುವೆಯ ಒಪ್ಪಂದ

## ವಿಜಯಪುರದ ಮಹಿಳಾ ವಿವಿ ಮತ್ತು ಮುಂಬೈನ ಎಸ್‌ಎನ್‌ಡಿಟಿ ಮಹಿಳಾ ವಿವಿ ಮಧ್ಯ ಶೀಘ್ರದಲ್ಲೇ ಶೈಕ್ಷಣಿಕ ಸಹಕಾರ ಒಪ್ಪಂದ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಇಲ್ಲಿಯ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ವಿಜಯಾ ಬಿ. ಕೋರಿಶೆಟ್ಟಿ ಅವರ ನೇತೃತ್ವದ ನಿಯೋಗವು ಆಗಸ್ಟ್ 4 ಮತ್ತು 5ರಂದು ದೇಶದ ಪ್ರಪ್ರಥಮ ಮಹಿಳಾ ವಿಶ್ವವಿದ್ಯಾನಿಲಯವಾಗಿರುವ ಮುಂಬೈನ ಎಸ್‌ಎನ್‌ಡಿಟಿ ಮಹಿಳಾ ವಿಶ್ವವಿದ್ಯಾಲಯದ ಚರ್ಚ್‌ಗೇಟ್ ಹಾಗೂ ಜುಹು ಆವರಣಗಳಿಗೆ ಭೇಟಿ ನೀಡಿ, ಶೈಕ್ಷಣಿಕ ಹಾಗೂ ಸಂಶೋಧನಾ ಸಹಕಾರದ ಕುರಿತು ಮಹತ್ವದ ಚರ್ಚೆ ನಡೆಸಿತು.

ಎಸ್‌ಎನ್‌ಡಿಟಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಉಜ್ವಲಾ ಚಕ್ರದೇವ್ ಅವರು ನಿಯೋಗವನ್ನು ಸ್ವಾಗತಿಸಿ, ವಿಶ್ವವಿದ್ಯಾಲಯದಲ್ಲಿ ನಡೆಯುತ್ತಿರುವ ಉನ್ನತ ಶಿಕ್ಷಣ, ಸಂಶೋಧನೆ, ನವೋದ್ಯಮ, ಕೌಶಲ್ಯಾಭಿವೃದ್ಧಿ ಮತ್ತು ವಿದ್ಯಾರ್ಥಿ-ಕೇಂದ್ರಿತ ಚಟುವಟಿಕೆಗಳ ಕುರಿತು ಸಮಗ್ರ ಮಾಹಿತಿ ನೀಡಿದರು.

ವಿಜಯಪುರ ಮಹಿಳಾ ವಿವಿಯ ಈ ನಿಯೋಗದಲ್ಲಿ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗದ ಹಿರಿಯ ಪ್ರಾಧ್ಯಾಪಕ ಪ್ರೊ.ಪಿ.ಜಿ.ತಡಸದ, ಕಂಪ್ಯೂಟರ್ ವಿಜ್ಞಾನ ವಿಭಾಗದ ಪ್ರಾಧ್ಯಾಪಕ ಪ್ರೊ.ಜಿ.ಜಿ.ರಜಪೂತ, ಸಮಾಜ-ಕಾರ್ಯ ವಿಭಾಗದ ಪ್ರಾಧ್ಯಾಪಕ ಪ್ರೊ.ಜಿ.ಬಿ. ಸೋನಾರ್ ಹಾಗೂ ಆಹಾರ ಸಂಸ್ಕರಣೆ ಮತ್ತು ಪೋಷಣೆ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಜೆನ್ನಿಫರ್ ಸೌಲಮ್ ಇದ್ದರು.

ಈ ಭೇಟಿಯ ಸಂದರ್ಭದಲ್ಲಿ ಎರಡೂ ಮಹಿಳಾ ವಿಶ್ವವಿದ್ಯಾಲಯಗಳ ನಡುವೆ ಶೀಘ್ರದಲ್ಲೇ ಪರಸ್ಪರ ತಿಳುವಳಿಕೆ ಒಪ್ಪಂದ (ಎಂಓಯು)ಕ್ಕೆ ಸಹಿ ಹಾಕುವ ಕುರಿತು ಉಭಯ ಕುಲಪತಿಗಳು ಸಕಾರಾತ್ಮಕ ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಒಪ್ಪಂದದ ಮೂಲಕ ಶೈಕ್ಷಣಿಕ ಸಹಕಾರ, ಜಂಟಿ ಸಂಶೋಧನೆ, ಅಧ್ಯಾಪಕರ ಹಾಗೂ ವಿದ್ಯಾರ್ಥಿಗಳ ವಿನಿಮಯ ಕಾರ್ಯಕ್ರಮಗಳು, ನವೋದ್ಯಮ, ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಕ್ಷೇತ್ರಗಳಲ್ಲಿ ಪರಸ್ಪರ ಸಹಯೋಗವನ್ನು ವಿಸ್ತರಿಸುವ ಉದ್ದೇಶ ಹೊಂದಲಾಗಿದೆ. ಕರ್ನಾಟಕ ಮತ್ತು ಮಹಾರಾಷ್ಟ್ರದ ಮಹಿಳಾ ವಿಶ್ವವಿದ್ಯಾಲಯಗಳನ್ನು ಸಂಪರ್ಕಿಸುವ ಮಹತ್ವದ ಶೈಕ್ಷಣಿಕ ಸೇತುವೆಯಾಗಿ ಈ ಒಪ್ಪಂದ ಕಾರ್ಯನಿರ್ವಹಿಸಲಿದೆ. ಇದು ಎರಡೂ ವಿಶ್ವವಿದ್ಯಾನಿಲಯಗಳ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಲಿದೆ.

ವಿಜಯಪುರ ಮಹಿಳಾ ವಿವಿ ನಿಯೋಗವು ಜುಹು ಮತ್ತು ಚರ್ಚ್‌ಗೇಟ್ ಆವರಣಗಳಲ್ಲಿರುವ ವೈಜ್ ಮಹಿಳಾ ನವೋದ್ಯಮ ಮತ್ತು ಸ್ಟಾರ್ಟಪ್ ಇಂಕ್ಯುಬೇಷನ್ ಸೆಂಟರ್, ಪ್ರೀ-ಇಂಕ್ಯುಬೇಷನ್ ಸೆಂಟರ್, ಶೈಕ್ಷಣಿಕ ತಂತ್ರಜ್ಞಾನ ವಿಭಾಗ, ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಕಾಲೇಜು, ಎಸ್.ವಿ.ಟಿ. ಗೃಹ ವಿಜ್ಞಾನ ಕಾಲೇಜು, ಫಾರ್ಮಸಿ ಕಾಲೇಜು, ಜಾನಕಿದೇವಿ ಬಜಾಜ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್, ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ ವಿಭಾಗ, ವಿಶೇಷ ಶಿಕ್ಷಣ ವಿಭಾಗ, ವಿಶ್ವವಿದ್ಯಾಲಯ ಗ್ರಂಥಾಲಯ ಹಾಗೂ ಅನಿಮಲ್ ಹೌಸ್ ಸೇರಿದಂತೆ ವಿವಿಧ ಶೈಕ್ಷಣಿಕ ಮತ್ತು ಸಂಶೋಧನಾ ಕೇಂದ್ರಗಳಿಗೆ ಭೇಟಿ ನೀಡಿ ಅಲ್ಲಿನ ಆಧುನಿಕ ಸೌಲಭ್ಯಗಳು, ಸಂಶೋಧನಾ ಚಟುವಟಿಕೆಗಳು ಹಾಗೂ ವಿದ್ಯಾರ್ಥಿ-ಕೇಂದ್ರಿತ ಕಾರ್ಯಕ್ರಮಗಳನ್ನು ವೀಕ್ಷಿಸಿತು.

ವಿಶೇಷವಾಗಿ ವಿಶ್ವವಿದ್ಯಾಲಯದ ಗ್ರಂಥಾಲಯದಲ್ಲಿನ ಡಿಜಿಟಲ್ ಸಂಪನ್ಮೂಲಗಳು, ಆಧುನಿಕ ಮೂಲಸೌಕರ್ಯ ಹಾಗೂ ವಿದ್ಯಾರ್ಥಿನಿಯರಿಗಾಗಿ ರೂಪಿಸಿರುವ ಜ್ಞಾನಾಧಾರಿತ ವ್ಯವಸ್ಥೆಯನ್ನು ಕುಲಪತಿ ಪ್ರೊ.ವಿಜಯಾ ಬಿ. ಕೋರಿಶೆಟ್ಟಿ ನೇತೃತ್ವದ ತಂಡ ಪ್ರಶಂಸಿಸಿತು. ಅಲ್ಲದೆ, ಮಹಿಳಾ ಶಿಕ್ಷಣ, ಸಂಶೋಧನೆ, ನವೋದ್ಯಮ ಮತ್ತು ಉದ್ಯಮಶೀಲತೆ ಕ್ಷೇತ್ರಗಳಲ್ಲಿ ಎಸ್ಎನ್‌ಡಿಟಿ ಮಹಿಳಾ ವಿಶ್ವವಿದ್ಯಾಲಯ ಸಾಧಿಸಿರುವ ಗಮನಾರ್ಹ ಪ್ರಗತಿಯನ್ನು ತಂಡ ಶ್ಲಾಘಿಸಿತು.

ಈ ಸಂದರ್ಭದಲ್ಲಿ ಎರಡೂ ವಿಶ್ವವಿದ್ಯಾಲಯಗಳ ಅಧ್ಯಾಪಕರೊಂದಿಗೆ ಸಂವಾದ ನಡೆಸಿ, ಜಂಟಿ ಸಂಶೋಧನೆ, ಶೈಕ್ಷಣಿಕ ವಿನಿಮಯ, ಕೌಶಲ್ಯಾಭಿವೃದ್ಧಿ, ನವೀನ ಶಿಕ್ಷಣ ಪದ್ಧತಿಗಳು ಹಾಗೂ ಭವಿಷ್ಯದ ಸಹಯೋಗದ ಅವಕಾಶಗಳ ಕುರಿತು ವಿಸ್ತೃತ ಚರ್ಚೆ ನಡೆಸಲಾಯಿತು.

ಈ ಸೌಹಾರ್ದ ಭೇಟಿ ಎರಡೂ ಮಹಿಳಾ ವಿಶ್ವವಿದ್ಯಾಲಯಗಳ ನಡುವಿನ ಶೈಕ್ಷಣಿಕ ಸಂಬಂಧಗಳನ್ನು ಇನ್ನಷ್ಟು ಬಲಪಡಿಸುವುದರ ಜೊತೆಗೆ ರಾಷ್ಟ್ರೀಯ ಮಟ್ಟದಲ್ಲಿ ಮಹಿಳಾ ಉನ್ನತ ಶಿಕ್ಷಣ, ಸಂಶೋಧನೆ ಮತ್ತು ನವೋದ್ಯಮಕ್ಕೆ ಹೊಸ ದಿಕ್ಕು ನೀಡುವ ಮಹತ್ವದ ಹೆಜ್ಜೆಯಾಗಿದೆ.

# ಮಾನ್ಯ ಮುಖ್ಯಮಂತ್ರಿಗಳಿಗೆ ಡಾ.ಪಟ್ಟಣ ಬಹಿರಂಗ ಪತ್ರ

### ಕರ್ನಾಟಕದಲ್ಲಿ ಲಿಂಗಾಯತರಿಗೆ ಅಲ್ಪ ಸಂಖ್ಯಾತ ಸ್ಥಾನಮಾನ ನೀಡಲು ಡಾ.ಶಶಿಕಾಂತ ಪಟ್ಟಣ ಆಗ್ರಹ





**ಮಾನ್ಯರೇ,**

12ನೇ ಶತಮಾನದಲ್ಲಿ ಜಗಜ್ಯೋತಿ ಬಸವಣ್ಣನವರು ಸ್ಥಾಪಿಸಿದ ಲಿಂಗಾಯತ ಧರ್ಮವು ಸಮಾನತೆ, ಮಾನವೀಯ ಘನತೆ, ಕಾಯಕ, ದಾಸೋಹ, ಸಾಮಾಜಿಕ ನ್ಯಾಯ, ಆಧ್ಯಾತ್ಮಿಕ ಸ್ವಾತಂತ್ರ್ಯ ಹಾಗೂ ಜಾತಿ ಆಧಾರಿತ ತಾರತಮ್ಯದ ನಿರಾಕರಣೆಯ ತತ್ವಗಳ ಮೇಲೆ ನಿರ್ಮಿತವಾಗಿದೆ.

ಇಷ್ಟಲಿಂಗ ಧಾರಣೆ ಮತ್ತು ಪೂಜೆ, ವಚನ ಸಾಹಿತ್ಯ, ಹಾಗೂ ಶರಣ ಸಂಪ್ರದಾಯಗಳು ಲಿಂಗಾಯತ ಧರ್ಮದ ವಿಶಿಷ್ಟ ಧಾರ್ಮಿಕ ಅಡಿಪಾಯಗಳಾಗಿವೆ.

ಲಿಂಗಾಯತ ಸಮುದಾಯದ ಅನೇಕರು ತಮ್ಮನ್ನು ಪ್ರಾಥಮಿಕವಾಗಿ ಲಿಂಗಾಯತ ಧರ್ಮದ ಅನುಯಾಯಿಗಳೆಂದು ಗುರುತಿಸಿಕೊಳ್ಳುತ್ತಿದ್ದು, ಇದನ್ನು ಪ್ರತ್ಯೇಕ ಧಾರ್ಮಿಕ ಸಂಪ್ರದಾಯವೆಂದು ಪರಿಗಣಿಸುತ್ತಾರೆ. ಈ ವಿಶಿಷ್ಟ ಧಾರ್ಮಿಕ ಅಸ್ತಿತ್ವವನ್ನು ಅಧ್ಯಯನ ಮಾಡಲು ಕರ್ನಾಟಕ ಸರ್ಕಾರ ರಚಿಸಿದ್ದ ನ್ಯಾಯಮೂರ್ತಿ ಹೆಚ್. ಎನ್. ನಾಗಮೋಹನ ದಾಸ್ ಸಮಿತಿಯು ಲಿಂಗಾಯತ ಧರ್ಮದ ಐತಿಹಾಸಿಕ, ಧಾರ್ಮಿಕ, ತಾತ್ವಿಕ ಹಾಗೂ ಸಾಮಾಜಿಕ ಹಿನ್ನೆಲೆಯನ್ನು ಸಮಗ್ರವಾಗಿ ಪರಿಶೀಲಿಸಿ ತನ್ನ ವರದಿಯನ್ನು ಸಲ್ಲಿಸಿತು. ಸಮಿತಿಯ ವರದಿಯ ಆಧಾರದ ಮೇಲೆ ಕರ್ನಾಟಕ ಸಚಿವ ಸಂಪುಟವು 2018ರ ಮಾರ್ಚ್ ತಿಂಗಳಲ್ಲಿ ಲಿಂಗಾಯತ ಧರ್ಮಕ್ಕೆ ಪ್ರತ್ಯೇಕ ಧಾರ್ಮಿಕ ಮಾನ್ಯತೆ ನೀಡುವ ಕುರಿತು ಶಿಫಾರಸು ಮಾಡಿ, ಅದನ್ನು ಭಾರತ ಸರ್ಕಾರದ ಪರಿಗಣನೆಗಾಗಿ ಕಳುಹಿಸಿತ್ತು. ಆದರೆ ಈ ವಿಷಯ ಇನ್ನೂ ಅಂತಿಮ ನಿರ್ಧಾರಕ್ಕೆ ಬಂದಿಲ್ಲ. ಕಾರಣ ತಮ್ಮ ಘನ ಸರಕಾರವು ಬಹು ವರ್ಷಗಳ ಬೇಡಿಕೆಯಾದ ಲಿಂಗಾಯತ ಧರ್ಮದ ಅಲ್ಪ ಸಂಖ್ಯಾತ ಸ್ಥಾನಮಾನ ಸಲುವಾಗಿ ಕೇಂದ್ರ ಅಲ್ಪ ಸಂಖ್ಯಾತ ಆಯೋಗಕ್ಕೆ ಮರು ಮನವಿಯನ್ನು ಸಲ್ಲಿಸಿ ಲಿಂಗಾಯತರಿಗೆ ಅಲ್ಪ ಸಂಖ್ಯಾತ ಸ್ಥಾನಮಾನ ದೊರಕಿಸಿ ಕೊಡಲು ಭಕ್ತಿಯಿಂದ ಕೇಳಿ ಕೊಳ್ಳುತ್ತೇವೆ.

ಅದೇ ರೀತಿ, ಭಾರತದ ಸಂವಿಧಾನವು ವಿಧಿ 25, 26, 29 ಹಾಗೂ 30ರ ಮೂಲಕ ಧಾರ್ಮಿಕ ಸ್ವಾತಂತ್ರ್ಯ ಮತ್ತು ಅಲ್ಪಸಂಖ್ಯಾತರ ಹಕ್ಕುಗಳನ್ನು ರಕ್ಷಿಸಿದೆ.

ನ್ಯಾಯಮೂರ್ತಿ ಎಂ. ಎನ್. ವೆಂಕಟಚಲಯ್ಯ ಅವರ ಅಧ್ಯಕ್ಷತೆಯ ರಾಷ್ಟ್ರೀಯ ಸಂವಿಧಾನ ಪರಿಶೀಲನಾ ಆಯೋಗ ಸೇರಿದಂತೆ ವಿವಿಧ ಆಯೋಗಗಳು ಹಾಗೂ ಸಂವಿಧಾನಾತ್ಮಕ ಚರ್ಚೆಗಳು, ವಿಶಿಷ್ಟ ಧರ್ಮ, ಸಂಸ್ಕೃತಿ, ನಂಬಿಕೆ ಮತ್ತು ಸಂಪ್ರದಾಯಗಳನ್ನು ಹೊಂದಿರುವ ಸಮುದಾಯಗಳ ಗುರುತನ್ನು ಸಂರಕ್ಷಿಸುವ ಅಗತ್ಯವನ್ನು ಒತ್ತಿಹೇಳಿವೆ. ಸುಪ್ರೀಂ ಕೋರ್ಟ್ ಸಹ ಅಲ್ಪಸಂಖ್ಯಾತ ಸಮುದಾಯಗಳಿಗೆ ತಮ್ಮ ಧಾರ್ಮಿಕ ಹಾಗೂ ಸಾಂಸ್ಕೃತಿಕ ಅಸ್ತಿತ್ವವನ್ನು ಕಾಪಾಡಿಕೊಳ್ಳುವ ಮತ್ತು ತಮ್ಮ ಸಂಸ್ಥೆಗಳನ್ನು ನಿರ್ವಹಿಸುವ ಹಕ್ಕುಗಳನ್ನು ಪುನರುಚ್ಚರಿಸಿದೆ.

ನಮ್ಮ ಈ ಬೇಡಿಕೆಯು ಯಾವುದೇ ಧರ್ಮ, ಸಮುದಾಯ ಅಥವಾ ನಂಬಿಕೆಯ ವಿರುದ್ಧವಲ್ಲ. ಇದು ನಮ್ಮ ಧಾರ್ಮಿಕ ಅಸ್ತಿತ್ವ, ಪರಂಪರೆ ಮತ್ತು ಆಧ್ಯಾತ್ಮಿಕ ಪರಂಪರೆಯನ್ನು ಸಂವಿಧಾನಾತ್ಮಕವಾಗಿ ಮಾನ್ಯಗೊಳಿಸುವ ಶಾಂತಿಯುತ ಹಾಗೂ ಪ್ರಜಾಸತ್ತಾತ್ಮಕ ಮನವಿಯಾಗಿದೆ. ಪ್ರತಿಯೊಂದು ಸಮುದಾಯಕ್ಕೂ ತನ್ನದೇ ಆದ ಧಾರ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿಕೊಳ್ಳುವ ಹಾಗೂ ಅಭಿವ್ಯಕ್ತಿಪಡಿಸುವ ಹಕ್ಕಿದೆ ಎಂಬ ನಂಬಿಕೆಯನ್ನು ನಾವು ಹೊಂದಿದ್ದೇವೆ.

ಆದ್ದರಿಂದ, ಲಿಂಗಾಯತ ಧರ್ಮದ ಐತಿಹಾಸಿಕ, ತಾತ್ವಿಕ ಮತ್ತು ಧಾರ್ಮಿಕ ವಿಶಿಷ್ಟತೆ, ನ್ಯಾಯಮೂರ್ತಿ ನಾಗಮೋಹನ ದಾಸ್ ಸಮಿತಿಯ ವರದಿ, ಕರ್ನಾಟಕ ಸಚಿವ ಸಂಪುಟದ ಶಿಫಾರಸು ಹಾಗೂ ಅಲ್ಪಸಂಖ್ಯಾತರ ಹಕ್ಕುಗಳಿಗೆ ಸಂಬಂಧಿಸಿದ ಸಂವಿಧಾನಾತ್ಮಕ ತತ್ವಗಳನ್ನು ಸಮಗ್ರವಾಗಿ ಪರಿಗಣಿಸಿ, ಲಿಂಗಾಯತ ಧರ್ಮವನ್ನು ಸ್ವತಂತ್ರ ಧರ್ಮವಾಗಿ ಮಾನ್ಯತೆ ಜೊತೆಗೆ ಕರ್ನಾಟಕ ರಾಜ್ಯದಲ್ಲಿ ಲಿಂಗಾಯತರಿಗೆ ಅಲ್ಪ ಸಂಖ್ಯಾತ ಸ್ಥಾನಮಾನ

ನೀಡುವ ಕುರಿತು ಸೂಕ್ತ ಸಂವಿಧಾನಾತ್ಮಕ ನಿರ್ಧಾರ ಕೈಗೊಳ್ಳುವಂತೆ ಭಾರತ ಸರ್ಕಾರ ಹಾಗೂ ಕೇಂದ್ರ ಅಲ್ಪಸಂಖ್ಯಾತರ ವ್ಯವಹಾರಗಳ ಸಚಿವಾಲಯವನ್ನು ನಾವು ವಿನಮ್ರವಾಗಿ ಕೋರುತ್ತೇವೆ.

ಬಹು ನಿರೀಕ್ಷೆ ಹಾಗೂ ಆಶಾವಾದಗಳೊಂದಿಗೆ ಶರಣು.

ತಮ್ಮ ಆಜ್ಞಾಧಾರಕ
■ ಡಾ. ಶಶಿಕಾಂತ ಪಟ್ಟಣ
■ ಡಾ ಶಶಿಕಾಂತ ಪಟ್ಟಣ
ರಾಮದುರ್ಗ ಪುಣೆ

# ಬಸ್ಸಲ್ಲಿ ಸಿಕ್ಕ ಚಿನ್ನ ಮರಳಿಸಿ ಪ್ರಾಮಾಣಿಕತೆ ಮೆರೆದ ಕಂಡಕ್ಟರ್

■ ಉದಯರಶ್ಮಿ ದಿನಪತ್ರಿಕೆ

ಕೆಂಭಾವಿ: ಸಿಂದಗಿ ಡಿಪೋದಿಂದ ಬರುವ ಸಿಂದಗಿ ಕೆಂಭಾವಿ ಪುಣೆ (ಕೆಎ–28 .ಎಫ್ –2449) ಬಸ್ಸಲ್ಲಿ ಕೆಂಭಾವಿಗೆ ಆಗಮಿಸಿದ ಮುದನೂರು ಗ್ರಾಮದ ಮಹಿಳೆ ತಮ್ಮ ಚೀಲವನ್ನು ಮರೆತು ಬಿಟ್ಟು ಹೋಗಿದ್ದರು, ಹೌಹಾರಿದ ಮಹಿಳೆ ಮರೆತು ಹೋದ ಚೀಲವನ್ನು ಪುನಃ ಕೆಂಭಾವಿ ಬಸ್ ನಿಲ್ದಾಣದಲ್ಲಿ ನಿಂತಿದ್ದ ಪುಣೆ ಬಸ್ಸಿನ ಕಂಡಕ್ಟರ್ ಆರ್ ಎಸ್ ಬೂದಿಹಾಳ (206) ಡ್ರೈವರ್ ಬಿ ಎಂ ಪೂಜಾರಿ (134) ಇವರನ್ನು ಕೇಳಿದಾಗ ಆ ಚೀಲದಲ್ಲಿ ಏನಿದೆ ಎಂದು ಪ್ರಶ್ನಿಸಿದ ಕಂಡಕ್ಟರ ಚೀಲದಲ್ಲಿ ಸುಮಾರು 2–3 ತೊಲೆ ಬಂಗಾರದ ತಾಳಿ ಕಿವಿಯೋಲೆ ಇವೆ ಎಂದಾಗ ಕೆಂಭಾವಿಯ ಸಂಚಾರಿ ನಿರೀಕ್ಷರ ಸಮ್ಮುಖದಲ್ಲಿ ಮಹಿಳೆಯನ್ನು ವಿಚಾರಣೆ ನಡೆಸಿ ಮರೆತು ಹೋದ ಚೀಲವನ್ನು ಮತ್ತು ಬಂಗಾರದ ಒಡವೆಗಳನ್ನು ಮರಳಿ ಕೊಟ್ಟ ಕಂಡಕ್ಟರ್ ಹಾಗೂ ಡ್ರೈವರ್ ಈರ್ವರು ಪ್ರಾಮಾಣಿಕತೆಗೆ ಸಾರ್ವಜನಿಕರು ವ್ಯಾಪಕ ಮೆಚ್ಚುಗೆ ವ್ಯಕ್ತಪಡಿಸಿದರು. ಪುಣೆ ಬಸ್ಸಲ್ಲಿ ಪ್ರಯಾಣಿಸುತ್ತಿದ್ದ ಪದವಿ ಕಾಲೇಜಿನ ಕನ್ನಡ ಪ್ರಾಧ್ಯಾಪಕ ಮಲ್ಲಿಕಾರ್ಜುನ ಮರಡ್ಡಿ ಮಾತನಾಡಿ ಬಂಗಾರ ಎಂದರೆ ಬಾಯಿ ತೆರೆಯುವ



ಕಾಲಘಟ್ಟದಲ್ಲಿ ಇಂತವರು ಸಿಗುವುದು ಅಪರೂಪ ಇವರ ಪ್ರಾಮಾಣಿಕತೆಯನ್ನು ಸರ್ಕಾರ ಗುರುತಿಸಿ ಗೌರವಿಸಬೇಕು ಎಂದರು. ಶಿಕ್ಷಕರಾದ ಅಲಿ ಅಹ್ಮದ್ ಬಡೆಮಗೋಳ್, ಮತ್ತು ಮಲ್ಲಿಕಾರ್ಜುನ ಬಿರಾದಾರ ಸೇರಿದಂತೆ ಅನೇಕ ಪ್ರಯಾಣಿಕರು ಕಂಡಕ್ಟರ್ ಹಾಗೂ ಡ್ರೈವರ್ ಪ್ರಾಮಾಣಿಕತೆಯನ್ನು ಮುಕ್ತ ಕಂಠದಿಂದ ಕೊಂಡಾಡಿದರು

# ಬೀದಿಬದಿ ವ್ಯಾಪಾರಿಗಳನ್ನು ತೆರವುಗೊಳಿಸದಿರಲು ಮನವಿ

■ ಉದಯರಶ್ಮಿ ದಿನಪತ್ರಿಕೆ

ತಾಳಿಕೋಟೆ: ಪುರಸಭೆಯಿಂದ ಬೀದಿಬದಿ ವ್ಯಾಪಾರಸ್ಥರ ಲೈಸನ್ಸೊಂದಿಗೆ ತಾಳಿಕೋಟೆ ನಗರದ ಕೆಲವು ಭಾಗಗಳಲ್ಲಿ ತಮ್ಮ ಸಣ್ಣ ಪುಟ್ಟ ವ್ಯಾಪಾರಗಳೊಂದಿಗೆ ಜೀವನ ಸಾಗಿಸುತ್ತಾ ಸಾಗಿದ್ದಾರೆ. ಅಂತಹ ವ್ಯಾಪಾರಸ್ಥರನ್ನು ಯಾವುದೇ ಕಾರಣಕ್ಕೂ ತೆರವು ಗೊಳಿಸಕೂಡದೆಂದು ಕರ್ನಾಟಕ ಪ್ರದೇಶ ಬೀದಿಬದಿ ವ್ಯಾಪಾರಿಗಳ ಒಕ್ಕೂಟದ ನೇತೃತ್ವದಲ್ಲಿ ಪುರಸಭೆ ಮುಖ್ಯಾಧಿಕಾರಿಗೆ ಗುರುವಾರ ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ.

ಬೀದಿಬದಿ ವ್ಯಾಪಾರಿಗಳ ರಕ್ಷಣೆಗಾಗಿ ರೂಪಿಸಲಾದ ಕಾಯ್ದೆಯಡಿ ಸುಮಾರು 200 ಕ್ಕೂ ಅಧಿಕ ಬೀದಿಬದಿ ವ್ಯಾಪಾರಸ್ಥರು ಪುರಸಭೆಯಿಂದ ವ್ಯಾಪಾರಿ ಪರವಾನಿಗೆ ಪಡೆದುಕೊಂಡಿದ್ದು ಪ್ರತಿದಿನ ಭೂ ಬಾಡಿಗೆಯನ್ನು ಪುರಸಭೆಗೆ ಭರಣಾ ಮಾಡುತ್ತಿದ್ದಾರೆ, ಕಾರಣ ತಾವುಗಳು ಯಾವುದೇ ರೀತಿಯ ಕಾನೂನು ಕಾಯ್ದೆಗಳನ್ನು ಅನುಸರಿಸದೇ ತಾವುಗಳು ತೆರವುಗೊಳಿಸಲು ಮುಂದಾಗಿದ್ದು, ಈ ತೆರವು ಕಾರ್ಯಚರಣೆಯ ಮುಂಚೆ ಬೀದಿಬದಿ ವ್ಯಾಪಾರಸ್ಥರಿಗೆ ತೊಂದರೆಯಾಗದಂತೆ ಬೇರೆಡೆ ವ್ಯಾಪಾರ ಮಾಡುವಂತೆ ಸುಸಜ್ಜಿತ ಜಾಗವನ್ನು ಗುರುತು ಮಾಡಿ ಅಲ್ಲಿ ವ್ಯಾಪಾರ ಮಾಡಲು ಅನುಕೂಲ ಮಾಡಿಕೊಡಬೇಕೆಂದು ಸಲ್ಲಿಸಿದ ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಒದು ವೇಳೆ ಯಾವುದೇ ಕಾರಣ ನೀಡದೇ ಬಿದಿ ಬದಿ ವ್ಯಾಪಾರಿಗಳ ಮೇಲೆ ನಿರ್ಲಕ್ಷ ತೋರಿದಲ್ಲಿ ಎಲ್ಲ ಬೀದಿಬದಿ ವ್ಯಾಪಾರಿಗಳು ಕಾನೂನು ಬದ್ದವಾಗಿ ಹೋರಾಟ ಮಾಡಬೇಕಾಗುತ್ತದೆ ಎಂದು ತಿಳಿಸಿದ್ದಾರೆ.



ಮನವಿ ಪತ್ರವನ್ನು ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ ಅವರಿಗೆ ಸಲ್ಲಿಸಿದರು.

ಈ ಸಮಯದಲ್ಲಿ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹಿಬೂಬ ಕುಳಗೇರಿ, ನದೀಂ ಕಡು, ಮುಸ್ತಫಾ ಅತ್ತಾರ, ಇಸ್ಮಾಯಿಲ್ ಮುರಾಳ, ರಫೀಕ್ ಚೌದ್ರಿ, ಸಾದ ಪಠಾಣ, ಮೌಲಾ ಯಾದವ, ಮುಮ್ತುಜ ಅತ್ತಾರ, ದುರ್ಗಾಬಾಯಿ ಹಿಂಗಮೋರೆ, ದೇವಜಿನಾಥ ಹಿಂಗಮೋರೆ, ಬಸವರಾಜ ಬಂಡಾರಿ, ದಾವಲಸಾ ಪಾನವಾಲೆ, ಸೈಯದ ಶಹಾಪೂರ, ಗುತ್ತಮ್ಮ ಮಂಗ್ಯಾಳ, ನಾನೇಶ್ವರ ಹಿಂಗಮೋರೆ, ಖಾದಿರಸಾಬ ಅಸ್ಕಿ, ಮೈಹಿಬೂಬ ಚೌದ್ರಿ, ಮುಕ್ತುಮ ಬಳಗಾನೂರ, ರಾಜೇಸಾಬ ಯಲಗಾರ, ಮಾಸುಮ ಕೇಂಭಾವಿ, ಚಂದ್ರೇಶಖರ ಮಂಗ್ಯಾಳ, ಮಲ್ಲಪ್ಪ ಮೇಸ್ತಾನಕಿ, ನೀಲಮ್ಮ ಮೇಸ್ತಾನಕಿ, ಮಾದೇವಿ ಅಂಗಡಿ, ಅಬ್ದುಲ್ ಜಬ್ಬಾರ, ದಾವಲಸಾ ಮುಲ್ಲಾ, ಶಿವಮ್ಮ ಕುಂಟೋಜಿ, ದೇವಮ್ಮ ಲಚ್ಯಾಣ, ಮೊದಲಾದವರು ಇದ್ದರು.

# ಬ್ರಾಹ್ಮಣರಿಗೆ ಸಚಿವ ಸ್ಥಾನ ನೀಡಲು ಗುಂಡು ಕುಲಕರ್ಣಿ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಬ್ರಾಹ್ಮಣ ಸಮುದಾಯಕ್ಕೆ ಸಚಿವ ಸ್ಥಾನ ನೀಡಬೇಕು ಎಂದು ಬ್ರಾಹ್ಮಣ ಆರ್ಗನೈಜೇಷನ್ ಆಫ್ ಇಂಡಿಯಾ ರಾಜ್ಯ ಉಪಾಧ್ಯಕ್ಷ ಗುಂಡು ಕುಲಕರ್ಣಿ ಆಗ್ರಹಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು, ಕಳೆದ 30ವರ್ಷಗಳಲ್ಲಿ ಬ್ರಾಹ್ಮಣ ಸಮುದಾಯವನ್ನು ಸಚಿವ ಸಂಪುಟದಿಂದ ಹೊರಗಿಟ್ಟಿರುವುದು ಇದೇ ಮೊದಲು. ಪ್ರತಿಯೊಬ್ಬ ಮುಖ್ಯಮಂತ್ರಿಯೂ 2–3 ಬ್ರಾಹ್ಮಣ ಶಾಸಕರನ್ನು ಸಚಿವರನ್ನಾಗಿ ಮಾಡಿ ರಾಜ್ಯದಲ್ಲಿ ಗಣನೀಯ ಸಂಖ್ಯೆಯಲ್ಲಿರುವ ಬ್ರಾಹ್ಮಣ ಸಮುದಾಯಕ್ಕೆ ಪ್ರಾತಿನಿಧ್ಯ ನೀಡುತ್ತಾ ಬಂದಿದ್ದರು. ಆದರೆ ಈ ಬಾರಿ ಆ ಶಿಷ್ಟಾಚಾರವನ್ನು ಮುರಿಯಬಾರದು ಎಂದು ಮನವಿ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷದಲ್ಲಿ ಸಚಿವ ಸ್ಥಾನಕ್ಕೆ ಅರ್ಹತೆ ಹೊಂದಿರುವ ಹಲವಾರು ಬ್ರಾಹ್ಮಣ ಶಾಸಕರಿದ್ದಾರೆ. ಬ್ರಾಹ್ಮಣರು ಅಧಿಕಾರ ಪಡೆದರೆ ಎಲ್ಲ ಸಮುದಾಯಗಳ ಹಿತಕ್ಕಾಗಿ ಕೆಲಸ ಮಾಡುತ್ತಾ ಬಂದಿದ್ದಾರೆ. ಆದ್ದ–ರಿಂದ ಅವರಿಗೆ ಸಚಿವ ಸ್ಥಾನ ನೀಡುವುದು ಅಗತ್ಯವಾಗಿದೆ. ಬ್ರಾಹ್ಮಣ ಸಮುದಾಯದಲ್ಲಿ ಆರ್.ವಿ.ದೇಶಪಾಂಡೆ, ದಿನೇಶ್ ಗುಂಡೂರಾವ್ ಅಂತಹ ಹಿರಿಯ ಶಾಸಕರಿದ್ದಾರೆ. ಅವರಲ್ಲಿ ಒಬ್ಬರನ್ನು ಸಚಿವ ಸಂಪುಟಕ್ಕೆ ಪರಿಗಣಿಸಬೇಕಾಗಿತ್ತು. ಸಚಿವ ಸಂಪುಟದಲ್ಲಿ ಒಬ್ಬ ಬ್ರಾಹ್ಮಣ ಶಾಸಕರಿಗೂ ಸಚಿವ ಸ್ಥಾನ ನೀಡದೆ ಇರುವುದು ಸರಿಯಲ್ಲ. ತಕ್ಷಣ ಈ ಲೋಪ ಸರಿಪಡಿಸಿ ಬ್ರಾಹ್ಮಣ ಸಮುದಾಯಕ್ಕೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

# ಸಿಂದಗಿಯಲ್ಲಿ ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಭೆ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ಎಲ್ಲ ಅಧಿಕಾರಿಗಳು ತಮ್ಮ ಕಛೇ–ರಿಯಲ್ಲಿ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಬೇಕು ಎಂದು ಸೂಚಿಸಿದರು ಎಂದು ತಾಲೂಕು ದಂಡಾಧಿಕಾರಿ ಕರೆಪ್ಪ ಬೆಳ್ಳಿ ಎಲ್ಲ ಇಲಾಖೆಗಳ ಅಧಿಕಾ–ರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು.

ಸಿಂದಗಿ ಪಟ್ಟಣದ ತಾಲೂಕು ದಂಡಾಧಿಕಾರಿಗಳ ಕಾರ್ಯಾಲಯ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಆ.15ರಂದು ಆಚರಿಸಲ್ಪಡುವ ಸ್ವಾತಂತ್ರೋತ್ಸವ ದಿನಾಚರಣೆಗೆ ಅಗತ್ಯ ಸಿದ್ಧತೆಯಲ್ಲಿ ಎಲ್ಲರೂ ಭಾಗಿಯಾಗಬೇಕು. ಅಂದು ಬೆಳಗ್ಗೆ 7.45ರೊಳಗೆ ಎಲ್ಲ ಸರ್ಕಾರಿ, ಅರೇ ಸರ್ಕಾರಿ ಕಚೇರಿ ಮತ್ತು ಶಾಲಾ–ಕಾಲೇಜುಗಳಲ್ಲಿ ಧ್ವಜಾರೋಹಣ ನಡೆಸಬೇಕು. ಬಳಿಕ 8ಗಂಟೆಗೆ ತಹಶೀಲ್ದಾರ್ ಕಛೇರಿ ಆವರಣಕ್ಕೆ ಆಗಮಿಸಬೇಕು. ತಾಲೂಕು ಕ್ರೀಡಾಂಗಣದಲ್ಲಿ ಬೆಳಗ್ಗೆ ಸರಿಯಾಗಿ 9ಗಂಟೆಗೆ ಆರಂಭವಾಗುವ ವೇದಿಕೆ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು. ಆಯಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯ ಹಂಚಿಕೆಯಂತೆ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಕಾರ್ಯಕ್ರಮಕ್ಕೆ ತಾಲೂಕಾಡಳಿತದಿಂದ ಎಲ್ಲ ರೀತಿಯ ಸಹಕಾರ ನೀಡುವುದಾಗಿ ತಿಳಿಸಿದರು. ಇದೇ ಸಂದರ್ಭದಲ್ಲಿ ಇತ್ತೀಚಗೆ ಎಸ್ಐಆರ್ ಪ್ರಕ್ರಿಯೆಯಲ್ಲಿ ಕಾರ್ಯನಿರ್ವಹಿಸಿದ ಅತ್ಯತ್ತಮ ಬಿಎಲ್ಓ ಮತ್ತು ಮೇಲ್ವಿಚಾರಕರಿಗೆ, ದ್ವಿತೀಯ ಪಿಯುಸಿ ಮತ್ತು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತಾಲೂಕಿಗೆ ಪ್ರಥಮ, ದ್ವಿತೀಯ ಸ್ಥಾನಗಳಿಸಿದ ವಿದ್ಯಾರ್ಥಿಗಳಿಗೆ ಮತ್ತು ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಗುವುದು. ವಿವಿಧ ತಂಡಗಳ ರಚನೆ: ಕ್ರೀಡಾಂಗಣದ ವ್ಯವಸ್ಥೆ, ವೇದಿಕೆ ಮತ್ತು ಕಾರ್ಯಕ್ರಮ ನಿರ್ವಹಣೆ, ಪಥ ಸಂಚಲನ ಹಾಗೂ ಧ್ವಜದ ವ್ಯವಸ್ಥೆ, ಆರೋಗ್ಯ ಮತ್ತು ಮುಂಜಾಗ್ರತಾ ಕ್ರಮಗಳು, ಸ್ವಚ್ಛತೆ, ಕಾವಯತ್, ಎಲ್ಲ ವೃತ್ತಗಳಿಗೂ ದೀಪಾಲಂಕಾರ, ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಗಣ್ಯರಿಗೆ ವಿತರಿಸಬೇಕು. ಯಾವುದೇ ಲೋಪದೋಷ ಆಗದಂತೆ ಕಾರ್ಯಕ್ರಮ ನಡೆಯುವಂತಾಗಬೇಕು. ಸರಕಾರಿ ಶಾಲೆಯ ಮಕ್ಕಳು, ಅನುದಾನ ರಹಿತ, ಅನುದಾನಿತ ಶಾಲಾ ಮಕ್ಕಳಿಂದ ಬ್ಯಾಂಡ್, ಸಾಂಸ್ಕೃತಿಕ ಕಾರ್ಯಕ್ರಮಗಳು, ಲಘು ಉಪಹಾರ, ಆರೋಗ್ಯ, ಅಗ್ನಿಶಾಮಕ ಇಲಾಖೆಯಿಂದ ತುರ್ತು ಸೇವೆ ಸಿದ್ಧತೆ ಸೇರಿದಂತೆ ಹಲವಾರು ವಿಷಯಗಳ ನಿರ್ವಹಣೆಯ ಬಗ್ಗೆ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ನೌಕರ ಸಂಘದ ಅಧ್ಯಕ್ಷ ಅಶೋಕ ತೆಲ್ಲೂರ, ಕ್ಷೇತ್ರ ಶಿಕ್ಷಣಾಧಿಕಾರಿ ಟಿ.ಎಸ್.ಆಲಗೂರ, ರವಿ ಸಿರಗುಪ್ಪ, ಕಿರಣ ಹಂಪಿಹೊಳಿ, ಎಸ್.ಡಿ.ಕುಲಕರ್ಣಿ, ರಮೇಶ ಬಿರಾದಾರ, ಚೇತನ ಭಾಸಗಿ, ಆಯ್.ಎಂ.ಚಟ್ಟರಕಿ ಸೇರಿದಂತೆ undefineಜ ವಿವಿಧ ಇಲಾಖೆಯ ಅಧಿಕಾ–ರಿಗಳು ಇದ್ದರು.




# ಸಿಂದಗಿಯಲ್ಲಿ ನಶೆ ಮುಕ್ತ ಭಾರತ ಅಭಿಯಾನಕ್ಕೆ ಚಾಲನೆ
# ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರೀಶೈಲಗೌಡ ಕರೆ

■ ಉದಯರಶ್ಮಿ ದಿನಪತ್ರಿಕೆ


ಸಿಂದಗಿ: ಪ್ರತಿಯೊಬ್ಬರೂ ನಶೆ ಮುಕ್ತ ಜೀವನದ ಸಂಕಲ್ಪ ಕೈಗೊಂಡು, ಇತರರಲ್ಲೂ ಜಾಗೃತಿ ಮೂಡಿಸುವ ಕಾರ್ಯದಲ್ಲಿ ಭಾಗಿಯಾಗಬೇಕು. ಮಿಷನ್ ಸ್ಪಂದನ ಹಾಗೂ ನಶೆ ಮುಕ್ತ ಭಾರತ ಅಭಿಯಾನದಡಿ ದೇಶದ 10ಕೋಟಿ ಜನರನ್ನು ವ್ಯಸನಮುಕ್ತರನ್ನಾಗಿಸುವ ಬ್ರಹ್ಮಕುಮಾರಿ ಸಂಸ್ಥೆಯ ಮಹಾ ಸಂಕಲ್ಪ ಶ್ಲಾಘನೀಯವಾಗಿದ್ದು, ಇಂತಹ ಜನಜಾಗೃತಿ ಕಾರ್ಯಕ್ರಮಗಳು ಸಮಾಜದಲ್ಲಿ ಉತ್ತಮ ಬದಲಾವಣೆ ತರಲಿವೆ ಎಂದು ಬಿಜೆಪಿ ಮುಖಂಡ ಶ್ರೀಶೈಲಗೌಡ ಬಿರಾದಾರ ಮಾಗಣಗೇರಿ ಹೇಳಿದರು.

ಸಿಂದಗಿ ನಗರದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಪೂಜ್ಯ ದಾದಿ ಪ್ರಕಾಶಮಣಿ ಜೀ ಅವರ ಪವಿತ್ರ ಸ್ಮರಣಾರ್ಥ ಆಯೋಜಿಸಿದ ನಶೆ ಮುಕ್ತ ಭಾರತ ಅಭಿಯಾನದಲ್ಲಿ ವಿಕಸಿತ ಭಾರತದತ್ತ ಒಂದು ಸಬಲವಾದ ಹೆಜ್ಜೆ 10ಕೋಟಿ ನಶೆ ಮುಕ್ತರ ಪ್ರತಿಜ್ಞೆಗಳ ಮಹಾ ಅಭಿಯಾನದ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ನಶೆ ಮುಕ್ತ ಸಮಾಜವೇ ಆರೋಗ್ಯವಂತ, ಸುಶಿಕ್ಷಿತ ಮತ್ತು ಸಂಸ್ಕಾರಯುತ ರಾಷ್ಟ್ರದ ಭದ್ರ ಅಡಿಪಾಯವಾಗಿದೆ. ಯುವಜನತೆ ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಂಡು ದುಶ್ಚಟಗಳಿಂದ ದೂರವಿದ್ದಾಗ ಮಾತ್ರ ಕುಟುಂಬ, ಸಮಾಜ ಹಾಗೂ ದೇಶದ ಭವಿಷ್ಯ ಉಜ್ವಲವಾಗುತ್ತದೆ ಎಂದರು.

ಈ ವೇಳೆ ಇನ್ನರ್ ವೀಲ್ ಕ್ಲಬ್ ಮಾಜಿ ಅಧ್ಯಕ್ಷೆ ನಾಗರತ್ನ ಅಶೋಕ ಮನಗೂಳಿ ಮಾತನಾಡಿ, ಯುವಕರು ವ್ಯಸನ ಮತ್ತು ದುಶ್ಚಟಗಳಿಂದ ದೂರವಿದ್ದಾಗ ಮಾತ್ರ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ. ಪೋಷಕರು ಮಕ್ಕಳಲ್ಲಿ ಉತ್ತಮ ಸಂಸ್ಕಾರ ಮತ್ತು ಮೌಲ್ಯಗಳನ್ನು ಬೆಳೆಸುವ ಜವಾಬ್ದಾರಿಯನ್ನು ವಹಿಸಿಕೊಳ್ಳಬೇಕು. ವ್ಯಸನಮುಕ್ತ ಹಾಗೂ ವಿದ್ಯಾವಂತ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಸ್ವಸ್ಥ ಸಮಾಜ, ಸಮರ್ಥ ಭಾರತ ಎಂಬ ಧ್ಯೇಯದೊಂದಿಗೆ ಆಯೋಜಿಸಲಾದ ಈ ಕಾರ್ಯಕ್ರಮದಲ್ಲಿ ಬ್ರಹ್ಮಕುಮಾರಿ ಸಂಸ್ಥೆಯ ಸದಸ್ಯರು, ಗಣ್ಯರು, ಯುವಕರು ಹಾಗೂ ಸಾರ್ವಜನಿಕರು ಭಾಗವಹಿಸಿ ನಶೆ ಮುಕ್ತ ಜೀವನದ ಪ್ರತಿಜ್ಞೆ ಸ್ವೀಕರಿಸಿದರು. ಕಾರ್ಯಕ್ರಮದ ಸಾನಿಧ್ಯವನ್ನು ಓಂ ಶಾಂತಿಯ ಪವಿತ್ರಾ ಅಕ್ಕಾಜಿ ವಹಿಸಿದ್ದರು.

ತಾಲೂಕು ಸಾರ್ವಜನಿಕ ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಶಂಕರರಾವ್ ದೇಶಮುಖ ಸೇರಿದಂತೆ ಇತರರು ಇದ್ದರು.



# ಸಂಗೊಳ್ಳಿ ರಾಯಣ್ಣ ಭಾವಚಿತ್ರಕ್ಕೆ ಗೌರವ ಸಲ್ಲಿಸಲು ಮನವಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಗ್ರಾಮೀಣ ಮಟ್ಟದಿಂದ ತಾಲೂಕು ಹಾಗೂ ಜಿಲ್ಲಾ ಮಟ್ಟದ ಸರ್ಕಾರಿ ಮತ್ತು ಅರೆಸರ್ಕಾರಿ ಶಾಲೆ, ಕಾಲೇಜು ಹಾಗೂ ಸರ್ಕಾರಿ ಕಚೇರಿಗಳಲ್ಲಿ ಪ್ರತಿ ವರ್ಷ ಜನವರಿ 26ರ ಗಣರಾಜ್ಯೋತ್ಸವ ಹಾಗೂ ಆಗಸ್ಟ್ 15ರ ಸ್ವಾತಂತ್ರ ದಿನಾಚರಣೆ ವೇಳೆ ವೀರಯೋಧ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರವನ್ನು ಇರಿಸಿ ಗೌರವ ಸಲ್ಲಿಸುವಂತೆ ಅಧಿಕೃತ ಆದೇಶ ಹೊರಡಿಸಬೇಕು ಎಂದು ರಾಷ್ಟ್ರೀಯ ಸಂಗೊಳ್ಳಿ ರಾಯಣ್ಣ ಸೇನೆ, ಸಿಂದಗಿ ತಾಲ್ಲೂಕು ಘಟಕವು ಸಿಂದಗಿ ತಹಸೀಲ್ದಾರ್ ಕರೆಪ್ಪ ಬೆಳ್ಳಿ ಅವರ ಮೂಲಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವ–ರಿಗೆ ಮನವಿ ಸಲ್ಲಿಸಿದೆ.ಮನವಿ ಸಲ್ಲಿಸಿ ರಾಷ್ಟ್ರೀಯ ಸಂಗೊಳ್ಳಿ ರಾಯಣ್ಣ ಸೇನೆಯ ತಾಲೂಕಾಧ್ಯಕ್ಷ ಮಾಳು ಗುಬ್ಬೇವಾಡ ಮಾತನಾಡಿ, ಹಿಂದಿನ ಸರ್ಕಾರವು ರಾಜ್ಯ ಹಾಗೂ ಜಿಲ್ಲಾ ಮಟ್ಟದ ಕಾರ್ಯಕ್ರಮಗಳಲ್ಲಿ ಸಂಗೊಳ್ಳಿ ರಾಯಣ್ಣ ಅವರಿಗೆ ಗೌರವ ಸಲ್ಲಿಸಲು ಆದೇಶ ಹೊರಡಿಸಿತ್ತು. ಅದೇ ಮಾದರಿಯಲ್ಲಿ ಈ ಆದೇಶವನ್ನು ಗ್ರಾಮೀಣ ಮಟ್ಟ, ತಾಲೂಕು ಹಾಗೂ ಜಿಲ್ಲೆಗಳ ಎಲ್ಲ ಸರ್ಕಾರಿ ಮತ್ತು ಅರೆಸರ್ಕಾರಿ ಶಿಕ್ಷಣ ಸಂಸ್ಥೆಗಳು ಹಾಗೂ ಕಚೇರಿಗಳಿಗೂ ವಿಸ್ತರಿಸಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

ಈ ವೇಳೆ ಸಿದ್ದು ಕಾಚಾಪುರ, ನಿಂಗಪ್ಪ ಪೂಜಾರಿ, ಅಮೋಘಸಿದ್ಧ ಬೊಮ್ಮನಜೋಗಿ, ಸುನಿಲಕುಮಾರ ಕಾಮನಕೇರಿ, ಗಂಗಪ್ಪ ಪೂಜಾರಿ, ರೇವಣಸಿದ್ಧ ಠಣ–ಕೇದಾರ, ಮಾಳಪ್ಪ ಪೂಜಾರಿ, ರಾಜು ಕಾಚಾಪುರ ಸೇರಿದಂತೆ ಇತರರು ಇದ್ದರು.

# ಮನೆಯಲ್ಲಿ ವಿಜ್ಞಾನ

## ನಾವು - ನಮ್ಮವರು
### (ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಕುರಿತು ಲೇಖನ ಮಾಲಿಕೆ)

■ ಉದಯರಶ್ಮಿ ದಿನಪತ್ರಿಕೆ

ನಮ್ಮ ಸುತ್ತಲಿನ ಪ್ರಕೃತಿಯನ್ನು ನಾವು ಸದಾ ನೋಡುತ್ತಿದ್ದು ಅದರಲ್ಲಿ ಆಗುವ ಬದಲಾವಣೆಗಳನ್ನು ಗಮನಿಸುತ್ತಲೇ ಇರುತ್ತೇವೆ. ಹಾಗೆಯೇ ನಮ್ಮ ಈ ಶರೀರವನ್ನು ಕೂಡ ನಾವು ಗಮನಿಸಲೇಬೇಕು. ನಮ್ಮ ದೇಹದೊಳಗಿರುವ ಅಂಗಗಳ ಕಾರ್ಯನಿರ್ವಹಣೆ, ಶರೀರದಲ್ಲಾಗುವ ಬದಲಾವಣೆಗಳನ್ನು ಕೂಡ ನಾವು ಅರಿಯಲೇಬೇಕು. ದೇಹದ ವೈಜ್ಞಾನಿಕ ಸತ್ಯದ ಅರಿವು ನಮಗೆ ಇರಬೇಕು.



ನಾವು ತಿನ್ನುಣ್ಣುವ ಆಹಾರದ ಹಿಂದೆ ನೂರಾರು ಜನರ ಶ್ರಮವಿದೆ. ನಮ್ಮ ತಟ್ಟೆಗೆ ಬಂದು ಬೀಳುವ ಆಹಾರದ ಹಿಂದೆ ಒಬ್ಬ ರೈತನ ಶ್ರಮವಿದ್ದು ಹದವಾದ ಮಳೆ ಬೀಳುವ ಮುನ್ನವೇ ತನ್ನ ಹೊಲವನ್ನು ತಯಾರಿಸಿ ಇಟ್ಟುಕೊಳ್ಳುವ ರೈತ ಒಂದು ಪುಟ್ಟ ಮಳೆಯಾದೊಡನೆ ಆಯ್ದ ಬೀಜಗಳನ್ನು ಹೊಲದಲ್ಲಿ ಬಿತ್ತುತ್ತಾನೆ. ನೀರು ಹಾಯಿಸುತ್ತಾನೆ, ಕಳೆ ತೆಗೆಯುತ್ತಾನೆ, ಹುಲುಸಾದ ಬೆಳೆಯನ್ನು ಕಣ್ಣಲ್ಲಿ ಕಣ್ಣಿಟ್ಟು ಕಾಯುತ್ತಾ ಹಕ್ಕಿ ಪಕ್ಷಿಗಳು ತೆನೆಯನ್ನು ಹಾಳುಗೆಡವದಂತೆ, ಹುಳು ಹುಪ್ಪಟೆಗಳು ಬೀಳದಂತೆ ಗೊಬ್ಬರ, ರಾಸಾಯನಿಕಗಳನ್ನು ಬಳಸಿ ರಕ್ಷಿಸುತ್ತಾನೆ. ನಂತರ ಬೆಳೆದ ಬೆಳೆಯನ್ನು ತೆನೆ ಮು–ರಿದು ರಾಶಿ ಮಾಡಿ ಚೀಲಗಳಲ್ಲಿ ತುಂಬಿ ಕೃಷಿ ಉತ್ಪನ್ನ ಮಾರುಕಟ್ಟೆಗೆ ತಂದು ಮಾರುವ ಮತ್ತು ನಾವು ಅದನ್ನು ಕೊಳ್ಳುವ ಹಸನು ಮಾಡುವ ಹಿಟ್ಟು ಮಾಡಿ ಜರಡಿಯಾಡಿ ಅದನ್ನು ರೊಟ್ಟಿ ಮಾಡಿ, ಆ ರೊಟ್ಟಿ ನಮ್ಮ ತಟ್ಟೆಗೆ ಬಂದು ಬೀಳುವ ಮಧ್ಯದಲ್ಲಿ ನೂರಾರು ಜನರ ಬೆವರಿನ ಶ್ರಮವಿರುತ್ತದೆ ಆದ್ದರಿಂದ ನಾವು ನಮಗೆ ಕಿಂಚಿತ್ ಸಹಾಯ ಮಾಡಿದ ವ್ಯಕ್ತಿಯ ಕುರಿತು ಕೂಡ ಅಷ್ಟೇ ಕೃತಜ್ಞತಾ ಭಾವವನ್ನು ಯಾವಾಗಲೂ ಹೊಂದಿರಲೇಬೇಕು.

ನಮ್ಮ ಬದುಕಿನಲ್ಲಿ ಸಾಮಾನ್ಯ ಜ್ಞಾನದ ಜೊತೆ ವಿಜ್ಞಾನವು ಬೆರೆತಿದೆ. ನಮಗೆ ಗೊತ್ತಿಲ್ಲದೆ ನಾವು ವೈಜ್ಞಾನಿಕವಾಗಿ ಕಾರ್ಯನಿರ್ವಹಿಸುತ್ತವೆ. ಒಂದು ಕಪ್ ನೀರಿಗೆ ಮೂರು ಚಮಚ ಚಹಾ ಪುಡಿ ಹಾಕಿ ಕುದಿಸಿದಾಗ ಚಹಾ ತುಸು ಒಗರು, ಕಹಿ ಎನಿಸುತ್ತದೆ. ಹಾಗೆಂದು ಚಹಾದಲ್ಲಿರುವ ಕಹಿಯನ್ನು ತೆಗೆಯಲು ಸಾಧ್ಯವೇ ಎಂದರೆ ವೈಜ್ಞಾನಿಕವಾಗಿ ಅದು ಕೂಡ ಸಾಧ್ಯವಿಲ್ಲ. ಕಾರಣ ಚಹಾದ ಎಸರಿನಲ್ಲಿರುವ ಒಗರುತನವನ್ನು ಕಡಿಮೆ ಮಾಡಬೇಕೆಂದರೆ ಅದಕ್ಕೆ ನೀರನ್ನು ಹಾಕಬೇಕು. ಹಾಲನ್ನು ಹಾಕಿದರೆ ಮತ್ತಷ್ಟು ತಟಸ್ಥಗೊಳಿಸಬಹುದು. ಇಲ್ಲಿ ಚಹಾ ಪುಡಿ ಆಸಿಡ್ನಂತೆ( ಆಮ್ಲ) ಕಾರ್ಯನಿರ್ವಹಿಸಿದರೆ ನೀರು( ಪ್ರತ್ಯಾಮ್ಲ) ಬೇಸನಂತೆ ವರ್ತಿಸುತ್ತದೆ ಮತ್ತು ಹಾಲು ತಟಸ್ಥತೆಯನ್ನು ತೋರುತ್ತದೆ.

ಸಾಂಬಾರ್ ನಲ್ಲಿ ಗಟ್ಟಿಯಾದ ಬೇಳೆಯ ಗಸಿ ಮತ್ತು ತರಕಾರಿ ಹೋಳುಗಳು ತಳದಲ್ಲಿ ಇದ್ದರೆ ಮೇಲೆ ತಿಳಿಯಾದ ನೀರು ನಿಂತಿರುತ್ತದೆ.. ಇದರ ಮೂಲಕ ನಾವು ಸ್ಥಿತಿಸ್ಥಾಪಕತ್ವವನ್ನು ಕಲಿಯಬಹುದು.

ಇನ್ನು ಘನಪದಾರ್ಥವಾದ ಸಿಲಿಂಡರ್ ನಲ್ಲಿ ದ್ರವೀಕೃತ ಅನಿಲವನ್ನು ಸೇರಿಸಿದ್ದು ಗ್ಯಾಸ್ ಅನ್ನು ಆನ್ ಮಾಡಿದಾಗ ಅನಿಲವು ಇಂಧನದ ರೂಪದಲ್ಲಿ ಹೊರಹೊಮ್ಮುತ್ತದೆ.. ಇದು ನಮ್ಮ ವಿಜ್ಞಾನದಲ್ಲಿ ಘನ ದ್ರವ ಮತ್ತು ಅನಿಲದ ಸ್ಥಿತಿಗಳನ್ನು ತೋರಲು ಅನುಕೂಲ ಅಲ್ಲವೇ?





ನಮ್ಮ ಆರೋಗ್ಯವನ್ನು ಕಾಯಲು ನಾವು ಸೇವಿಸುವ ಆಹಾರದಲ್ಲಿ ಪ್ರೋಟೀನ್, ವಿಟಮಿನ್, ಕ್ಯಾಲ್ಸಿಯಂ ಮತ್ತು ಹಸಿರು ತರಕಾರಿಗಳು ಅತ್ಯವಶ್ಯಕ.. ನಮ್ಮ ತಟ್ಟೆಯಲ್ಲಿ ಇರುವ ತರಕಾರಿ ಕಾಳು ಬೇಳೆ ಹಸಿರು ತಪ್ಪಲು ಪಲ್ಯಗಳು ನಮ್ಮ ಆಹಾರದ ತಟ್ಟೆಯಲ್ಲಿ ನಮಗೆ ಸಿಗುತ್ತವೆ ಅಲ್ಲವೇ?

ಅಡುಗೆ ಮನೆಯಲ್ಲಿ ನಾವು ಆವಿಯಾಗುವುದು, ಕುದಿಯುವುದು ಕಾಯಿಸುವುದು ಹೀಗೆ ಹತ್ತು ಹಲವು ವೈಜ್ಞಾನಿಕ ಸಂಗತಿಗಳನ್ನು ಕಲಿಯುತ್ತೇವೆ.

ಚಿಕ್ಕಂದಿನಲ್ಲಿ ಮಕ್ಕಳಿಗೆ ಪಾಠಗಳನ್ನು ನಾವು ಕಲಿಸಿಕೊಡಲೇಬೇಕು.. ನಾವು ಆಗ ಕಲಿಸಿಕೊಡದೆ ಇದ್ದರೆ ಮುಂದೆ ಮಕ್ಕಳು ತಮ್ಮ ಟೀಚರ್ ಹೇಳಿರುವುದನ್ನೆ ಸರಿ ಎಂದು ಪಾಲಕರು ಹೇಳುವ ವಿಷಯಗಳು ತಪ್ಪು ಎಂದು ಹೇಳುವ ಸಾಧ್ಯತೆಗಳು ಬಹಳ ಇರುತ್ತದೆ. ಇದಕ್ಕೆ ಕಾರಣ ಪಾಲಕರು! ಎಂದರೆ ತಪ್ಪಿಲ್ಲ. ಚಿಕ್ಕಂದಿನಲ್ಲಿ ಮಕ್ಕಳಿಗೆ ಎಲ್ಲ ವಿಷಯಗಳ ಅರಿವನ್ನು ಮೂಡಿಸಲು ಪಾಲಕರು ಪ್ರಯತ್ನಿಸಲೇಬೇಕು.

ಲೇಖನ
– ವೀಣಾ ಹೇಮಂತ್ ಗೌಡ ಪಾಟೀಲ್.
ಮುಂಡರಗಿ
ಗದಗ ಜಿಲ್ಲೆ





# ಜನಪ್ರತಿನಿಧಿಗಳು ಮತ್ತು ಶಿಕ್ಷಣ ಇಲಾಖೆಯ ಅಧಿಕಾರಿಗಳ ಧಿವ್ಯ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಆಕ್ರೋಶ

## ಎರಡು ದಶಕಗಳಿಂದ ಕಗ್ಗತ್ತಲಲ್ಲಿ ಕಡಕೋಳ ಸರ್ಕಾರಿ ಪ್ರೌಢ ಶಾಲೆ!

■ ಉದಯರಶ್ಮಿ ದಿನಪತ್ರಿಕೆ

ಕಲಬುರ್ಗಿ: ಒಂದು ಕಡೆ ಸರ್ಕಾರಿ ಶಾಲೆಗಳ ಅಭಿವೃದ್ಧಿಯ ಬಗ್ಗೆ ಸರ್ಕಾರ, ಮತ್ತು ಜನಪ್ರತಿನಿಧಿಗಳು ದೊಡ್ಡ ದೊಡ್ಡ ಘೋಷಣೆಗಳನ್ನು ಮಾಡುತ್ತಿದ್ದರೆ, ಮತ್ತೊಂದೆಡೆ, ಕಲಬುರ್ಗಿ ಜಿಲ್ಲೆಯ ಯಡ್ರಾಮಿ ತಾಲೂಕಿನ ಕಡಕೋಳ ಗ್ರಾಮದ ಸರ್ಕಾರಿ ಪ್ರೌಢ ಶಾಲೆ ಕಳೆದ ಎರಡು ದಶಕದ ಹೊಸ್ತಿಲಲ್ಲಿ 19 ವರ್ಷಗಳಿಂದ ವಿದ್ಯುತ್ ಸಂಪರ್ಕವಿಲ್ಲದೆ ಕತ್ತಲೆಯಲ್ಲೇ ಶಿಕ್ಷಣ ನೀಡುತ್ತಿರುವುದು ಆಡಳಿತ ವ್ಯವಸ್ಥೆಯ ವೈಫಲ್ಯಕ್ಕೆ ಜೀವಂತ ಸಾಕ್ಷಿಯಾಗಿದೆ,

10 ವರ್ಷಗಳಿಂದ ಧೂಳು ತಿನ್ನುತ್ತಿರುವ ಕಂಪ್ಯೂಟರ್‌ಗಳು ಬೆಳಕು ಕಾಣದೆ ನರಳುತ್ತಿವೆ,

ಈ ಕ್ಷೇತ್ರವನ್ನು ಪ್ರತಿನಿಧಿಸಿರುವ ಡಾ. ಅಜಯ್ ಧರ್ಮಸಿಂಗ್ ಅವರು ಮೂರು ಬಾರಿ ಶಾಸಕರಾಗಿ, ಕೆಕೆಆರ್‌ಡಿಬಿ ಅಧ್ಯಕ್ಷರಾಗಿ ಹಾಗೂ ಇದೀಗ ಸಚಿವರಾಗಿದ್ದರೂ, ತಮ್ಮದೇ ಕ್ಷೇತ್ರದ ಈ ಸರ್ಕಾರಿ ಶಾಲೆಗೆ ಇನ್ನೂ ವಿದ್ಯುತ್ ಸಂಪರ್ಕ ಕಲ್ಪಿಸದಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ಶಾಲೆಗೆ ಸುಮಾರು 10 ವರ್ಷಗಳ ಹಿಂದೆ ಕಂಪ್ಯೂಟರ್‌ಗಳನ್ನು ನೀಡಲಾಗಿತ್ತು. ಆದರೆ ವಿದ್ಯುತ್ ಸಂಪರ್ಕವೇ ಇಲ್ಲದ ಕಾರಣ ಅವು ಇಂದಿಗೂ ಬಳಕೆಯಾಗದೆ ಧೂಳು ಹಿಡಿದು ಬಿದ್ದಿವೆ. ಡಿಜಿಟಲ್ ಶಿಕ್ಷಣದ ಯುಗದಲ್ಲಿ ವಿದ್ಯಾರ್ಥಿಗಳು ಕಂಪ್ಯೂಟರ್ ಬಳಸುವ ಅವಕಾಶದಿಂದ ವಂಚಿತರಾಗಿದ್ದಾರೆ.

ವಿದ್ಯಾರ್ಥಿಗಳಿಗೆ ಸಮಾನ ಶಿಕ್ಷಣ, ಡಿಜಿಟಲ್ ಕಲಿಕೆ ಹಾಗೂ ಮೂಲಭೂತ ಸೌಲಭ್ಯಗಳ ಭರವಸೆ ನೀಡುವ ಸರ್ಕಾರದ ಮಾತುಗಳು ಪ್ರಚಾರಕ್ಕೆ ಸೀಮಿತವಾಗಿ, ನೆಲಮಟ್ಟದಲ್ಲಿ ಜಾರಿಗೆ ಬರದೇ, ಸರ್ಕಾರಿ ಶಾಲೆಗಳ ಅಭಿವೃದ್ಧಿ ಕೇವಲ ಕಡತ ಮತ್ತು ವರದಿಗಳಲ್ಲೇ ಅಡಕವಾಗಿದೆ ಎಂಬ ಟೀಕೆಗಳು ಕೇಳಿಬರುತ್ತಿವೆ.

ಖಾಸಗಿ ಶಾಲೆಗಳಿಗೆ ಸಿಗುವ ಸೌಲಭ್ಯಗಳು ಸರ್ಕಾರಿ ಶಾಲೆಯ ಮಕ್ಕಳಿಗೆ ಯಾಕೆ ಸಿಗಬಾರದು?

ಬಡ ಮಕ್ಕಳ ಶಿಕ್ಷಣದ ಬಗ್ಗೆ ಆಡಳಿತಕ್ಕೆ ಕಾಳಜಿ ಇದೆಯೇ?" ಎಂಬ ಪ್ರಶ್ನೆಯನ್ನು ಗ್ರಾಮಸ್ಥರು ಎತ್ತಿದ್ದಾರೆ.

19 ವರ್ಷಗಳಿಂದ ಒಂದೇ ಒಂದು ಸಮಸ್ಯೆ ಬಗೆಹರಿಯದಿದ್ದರೆ, ಸಂಬಂಧಪಟ್ಟ ಅಧಿಕಾರಿಗಳು ಎಷ್ಟು ಬಾರಿ ಪರಿಶೀಲನೆ ನಡೆಸಿದರು? ಜನಪ್ರತಿನಿಧಿಗಳು ಎಷ್ಟು ಬಾರಿ ಈ ಶಾಲೆಗೆ ಭೇಟಿ ನೀಡಿದರು? ಶಿಕ್ಷಣ ಇಲಾಖೆಯ ಅಧಿಕಾರಿಗಳು ಈ ಸ್ಥಿತಿಯನ್ನು ಗಮನಿಸಲೇ ಇಲ್ಲವೇ? ಎಂಬ ಪ್ರಶ್ನೆಗಳು ಈಗ ಉದ್ಭವಿಸಿವೆ.

ಕಡಕೋಳ ಶಾಲೆಯ ಕತ್ತಲೆ ಕೇವಲ ವಿದ್ಯುತ್ ಕೊರತೆಯ ಸಂಕೇತವಲ್ಲ; ಅದು ಸರ್ಕಾರಿ ಶಿಕ್ಷಣದ ಮೇಲಿನ ನಿರ್ಲಕ್ಷ್ಯದ ಸಂಕೇತವಾಗಿದೆ. ಇನ್ನಾದರೂ ಸಂಬಂಧಪಟ್ಟ ಇಲಾಖೆ ಹಾಗೂ ಜನಪ್ರತಿನಿಧಿಗಳು ಎಚ್ಚೆತ್ತು, ಶಾಲೆಗೆ ತಕ್ಷಣ ವಿದ್ಯುತ್ ಸಂಪರ್ಕ ಕಲ್ಪಿಸಿ, ಕಂಪ್ಯೂಟರ್‌ಗಳನ್ನು ಕಾರ್ಯಾರಂಭಗೊಳಿಸಿ, ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯ ಒದಗಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

# ಕಡೇಚೂರು ಬಾಡಿಯಾಳ ಘಟನೆ ಸಂಸದ ರಾಧಾಕೃಷ್ಣ ದೊಡ್ಡಮನಿ ಸಂತಾಪ, ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡಲು ಸೂಚನೆ



ಕಲಬುರಗಿ: ಕಡೇಚೂರು–ಬಾಡಿಯಾಳ ಕೈಗಾರಿಅ ಪ್ರದೇಶದಲ್ಲಿ ನಿನ್ನೆ ಸಲ್ಫರ್ ಡೈಯಾಕ್ಸೈಡ್ ಅನಿಲ ಸೋರಿಕೆಯಿಂದ ಫಾರ್ಮಾ ಕಂಪನಿಯಲ್ಲಿ ಕರ್ತವ್ಯನಿರತ ಮೂವರು ಕಾರ್ಮಿಕರು ಮೃತಪಟ್ಟು ಮತ್ತಿಬ್ಬರು ತೀವ್ರಗಾಯಗೊಂಡ ಘಟನೆ ಕುರಿತು ಕಲಬುರಗಿ ಲೋಕಸಭಾ ಕ್ಷೇತ್ರದ ಸದಸ್ಯರಾದ ರಾಧಾಕೃಷ್ಣ ದೊಡ್ಡಮನಿ ಸಂತಾಪ ವ್ಯಕ್ತಪಡಿಸಿದ್ದಾರೆ.

ಘಟನೆಯ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲಾಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿ ಜೊತೆ ದೂರವಾಣಿಯಲ್ಲಿ ಮಾತನಾಡಿರುವ ಸಂಸದರು ಗಾಯಾಳುಗಳಿಗೆ ತುರ್ತು ಹಾಗೂ ಅಗತ್ಯ ಚಿಕಿತ್ಸೆ ದೊರಕಿಸಿಕೊಡುವಂತೆ ಅವರು ಸೂಚಿಸಿದ್ದಾರೆ.ಫಾರ್ಮಾ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಸುರಕ್ಷತೆಗೆ ಅಗತ್ಯ ಹಾಗೂ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿರುವ ಬಗ್ಗೆ ಪರಶೀಲನೆ ನಡೆಸುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿರುವ ಅವರು ನಿಯಮಾವಳಿ ಮೀರಿದ್ದರೆ ಅಗತ್ಯಕ್ರಮವಹಿಸುವಂತೆ ಅವರು ನಿರ್ದೇಶನ ನೀಡಿದ್ದಾರೆ.ದುರದೃಷ್ಟವಶಾತ್ ನಡೆದ ಘಟನೆಯಲ್ಲಿ ಪ್ರಾಣ ಕಳೆದುಕೊಂಡ ಬಡ ಕಾರ್ಮಿಕರ ಕುಟುಂಬ ವರ್ಗದವರಿಗೆ ಸಾಂತ್ವಾನ ಹೇಳಿರುವ ರಾಧಾಕೃಷ್ಣ ದೊಡ್ಡಮನಿ ಅವರು ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ.




ಕಲಬುರಗಿ: ಕರ್ನಾಟಕ ಲೋಕಸೇವಾ ಆಯೋಗ ( ಕೆಪಿಎಸ್‌ಸಿ)ವನ್ನು ಭ್ರಷ್ಟಾಚಾರದಿಂದ ಮುಕ್ತಗೊಳಿಸಿ ಅರ್ಹರಿಗೆ ನ್ಯಾಯ ಕೊಡಿಸುವಂತೆ ಆಗ್ರಹಿಸಿ ಇಂದು ಎಐಡಿವೈಒ ಮತ್ತು ಜೆಎಎಸ್‌ಸಿ ಸಂಘಟನೆಗಳಿಂದ ಸರದಾರ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.ಜಗನ್ನಾಥ ಎಸ್.ಎಚ್,ರಮೇಶ ದೇವಕರ್ ಸೇರಿದಂತೆ ಇತರರಿದ್ದರು.

### 14 ದಿನ ಚಾಲೂ, 10 ದಿನ ಬಂದ್ । ಕೆಬಿಜೆಎನ್ನೆಲ್ ಅಧೀಕ್ಷಕ ಅಭಿಯಂತರ ಶಿವಶಂಕರ ದೇವಾಪುರ ಮಾಹಿತಿ

# ಮುಂಗಾರು ಹಂಗಾಮಿಗೆ ಕಾಲುವೆ ಜಾಲಕ್ಕೆ ನೀರು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026–27ನೇ ಸಾಲಿನ ಮುಂಗಾರು ಹಂಗಾಮಿಗಾಗಿ ರಾಮಪುರ (ಪ.ಆ) ವೃತ್ತದ ವ್ಯಾಪ್ತಿಯ ಕಾಲುವೆ ಹಾಗೂ ಗುತ್ತಿ ಬಸವಣ್ಣ ಕಾಲುವೆಗಳಿಗೆ 14 ದಿನ ಚಾಲೂ ಹಾಗೂ 10 ದಿನ ಬಂದ್ ನಂತೆ ವಾರಬಂದಿ ಪದ್ಧತಿಯನುಸಾರ 116 ದಿನಗಳವರೆಗೆ ಜು. 28ರಿಂದ ನೀರು ಹರಿಸಲಾಗುತ್ತಿದೆ ಎಂದು ಕೃಷ್ಣಾ ಭಾಗ್ಯ ಜಲನಿಗಮದ ಅಧೀಕ್ಷಕ ಅಭಿಯಂತರರಾದ ಶಿವಶಂಕರ ದೇವಾಪುರ ತಿಳಿಸಿದ್ದಾರೆ. ಮುಂಗಾರು ಹಂಗಾಮಿಗಾಗಿ ನೀರು ಪೋಲಾಗದಂತೆ, ಆಲಮಟ್ಟಿ ಮತ್ತು ನಾರಾಯಣಪೂರ ಜಲಾಶಯದಡಿ ಬರುವ ಕಾಲುವೆಗಳಿಗೆ ನೀರು ಹರಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಜಲಸಂಪನ್ಮೂಲ ಸಚಿವರು ಸೂಚಿಸಿದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ಎರಡು ಜಲಾಶಯಗಳಲ್ಲಿ ನೀರಾವರಿಗಾಗಿ ಕಾಯ್ದಿರಿಸಿರುವ ನೀರಿನ ಪ್ರಮಾಣದಲ್ಲಿ ಮುಂಗಾರು ಹಂಗಾಮಿಗಾಗಿ ನೀರು ಹರಿಸುವ ಅವಧಿಯನ್ನು, ಆಲಮಟ್ಟಿ ಜಲಾಶಯದಲ್ಲಿ ಒಳಹರಿವು ಹೊರಹರಿವು ಪ್ರಮಾಣಕ್ಕೆ ಸಮನಾಗಿರುವವರೆಗೆ ಸತತವಾಗಿ ಕಾಲುವೆ ಜಾಲಕ್ಕೆ ನೀರು ಹರಿಸಲು ಹಾಗೂ ಒಂದು ವೇಳೆ ಆಲಮಟ್ಟಿಗೆ ಒಳಹರಿವು ಕಡಿಮೆಯಾದ ಪಕ್ಷದಲ್ಲಿ ಜಲಾಶಯಗಳಲ್ಲಿನ ಸಂಗ್ರಹ ಆಧರಿಸಿ, ಈ ಹಿಂದೆ ಅನುಸರಿಸಿದ 14 ದಿನ ಚಾಲೂ ಹಾಗೂ 10 ದಿನ ಬಂದ್ ನಂತೆ ವಾರಬಂದಿ ಪದ್ಧತಿಯನ್ನು ಅನುಸರಿಸಿ 116 ದಿನಗಳವರೆಗೆ ಕಾಲುವೆ ಜಾಲಗಳಿಗೆ ನೀರು ಹರಿಸಲಾಗುವುದು ಎಂದವರು ತಿಳಿಸಿದ್ದಾರೆ.

ಕಾಲುವೆ ಚಾಲೂ ದಿನಾಂಕಗಳು: ಜು. 28 ರಿಂದ ಆ. 10ರವರೆಗೆ, ಆ. 21ಸ ರಿಂದ ಸೆ. 3ರವರೆಗೆ, ಸೆ. 14 ರಿಂದ ಸೆ. 27ರವರೆಗೆ, ಅ. 8 ರಿಂದ ಅ. 21ರವರೆಗೆ ತಲಾ 14 ದಿನಗಳಂತೆ, ನ. 1 ರಿಂದ ನ. 10ರವರೆಗೆ 10 ದಿನಗಳಂತೆ ಒಟ್ಟು 66 ದಿನಗಳ ಕಾಲ ಕಾಲುವೆಗಳಿಗೆ ನೀರು ಚಾಲೂ ಇರುವ ದಿನಗಳನ್ನು ನಿಗದಿಪಡಿಸಲಾಗಿದೆ ಎಂದವರು ತಿಳಿಸಿದ್ದಾರೆ. ಕಾಲುವೆ ಬಂದ್ ದಿನಾಂಕಗಳು: ಆ.11 ರಿಂದ ಆ. 20ರವರೆಗೆ, ಸೆ. 4 ರಿಂದ ಸೆ. 13ರವರೆಗೆ, ಸೆ. 28 ರಿಂದ ಅ. 7ರವರೆಗೆ , ಅ. 22 ರಿಂದ ಅ. 31ರವರೆಗೆ ಹಾಗೂ ನ. 11 ರಿಂದ ನ. 20ರವರೆಗೆ ತಲಾ 10 ದಿನಗಳಂತೆ ಒಟ್ಟು 50 ದಿನಗಳ ಕಾಲ ಕಾಲುವೆ ಬಂದ್ ಇಡಲಾಗುವುದು ಎಂದವರು ತಿಳಿಸಿದ್ದಾರೆ.

ರೈತರು ನೀರನ್ನು ಮಿತವಾಗಿ ಬಳಸಿ, ಕೃಷ್ಣಾ ಭಾಗ್ಯ ಜಲ ನಿಗಮದ (ಕೆಬಿಜೆಎನ್‌ಎಲ್) ಅಧಿಕಾರಿಗಳೊಂದಿಗೆ ಸಹಕರಿಸಿ ಯಶಸ್ವಿ ನೀರು ನಿರ್ವಹಣೆಗೆ ಕೈಜೋಡಿಸಬೇಕಾಗಿ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಪರ್ಯಾಯ ವ್ಯವಸ್ಥೆಗೆ ಬೀದಿಬದಿ ವ್ಯಾಪಾರಿಗಳ ಒತ್ತಾಯ ಹ್ಯಾಂಡ್ ಪೋಸ್ಟ್ ನಲ್ಲಿ ಫುಟ್ಪಾತ್ ಅಂಗಡಿಗಳ ತೆರವುಮಾಡಿಸಿ

■ ಉದಯರಶ್ಮಿ ದಿನಪತ್ರಿಕೆ




ಎಚ್ ಡಿ ಕೋಟೆ: ಸುಪ್ರೀಕೋರ್ಟ್ ಆದೇಶವನ್ನು ನಾವು ಉಲ್ಲಂಘಿಸಿಲ್ಲ. ಫುಟ್ಪಾತ್ ತೆರವಿಗೆ ನಾವು ವಿರೋಧ ವ್ಯಕ್ತಪಡಿಸಿಲ್ಲ. ಆದರೆ ಬಡವರಿಗೊಂದು, ಉಳ್ಳವರಿಗೊಂದು ಆದೇಶ ತರಬೇಡಿ. ತಾಲೂಕಿನ ಹ್ಯಾಂಡ್ ಪೋಸ್ಟ್ ಸರ್ಕಲ್ ಬಳಿ ಪ್ರಭಾವಿಗಳು 34 ಕುಂಟೆ ಸರ್ಕಾರಿ ಜಾಗವನ್ನು ಒತ್ತುವರಿ ಮಾಡಿಕೊಂಡು ವಾಣಿಜ್ಯ ಚಟುವಟಿಕೆ ನಡೆಸುತ್ತಿದ್ದಾರೆ. ಮೊದಲು ಅದನ್ನು ತೆರವು ಮಾಡಿಸಿ, ಆ ಜಾಗದಲ್ಲಿ ನಮಗೆ ವ್ಯಾಪಾರ ಮಾಡಲು ಅವಕಾಶ ಮಾಡಿಕೊಡಿ ಎಂದು ಒತ್ತಾಯಿಸಿ ಬೀದಿಬದಿ ವ್ಯಾಪಾರಿಗಳು ಪ್ರತಿಭಟನೆ ನಡೆಸಿದರು.

ತಾಲೂಕಿನ ಹ್ಯಾಂಡ್ ಪೋಸ್ಟ್ ಸರ್ಕಲ್ ಮುಂಭಾಗ ಶ್ರೀ ಚಿಕ್ಕದೇವಮ್ಮ ಬೀದಿಬದಿ ವ್ಯಾಪಾರಿಗಳ ಸಂಘದ ಸಂಂಮುಕ್ತಾಶ್ರಯದಲ್ಲಿ ಜಮಾಯಿಸಿದ ಬೀದಿಬದಿ ವ್ಯಾಪಾರಿಗಳು, ರಸ್ತೆ ಬದಿ ಯಲ್ಲಿ ಸಣ್ಣಪುಟ್ಟ ವ್ಯಾಪಾರ ಮಾಡಿಕೊಂಡು ಜೀವನ ನಡೆಸುತ್ತಿದ್ದೆವು. ಅದನ್ನೇ ನಂಬಿಕೊಂಡು ಫೈನಾನ್ಸ್ ಕಂಪನಿಗಳಿಂದ ಸಾಲ ತೆಗೆದುಕೊಂಡು ಮಕ್ಕಳ ವಿದ್ಯಾಭ್ಯಾಸ ಸೇರಿದಂತೆ ಕುಟುಂಬ ನಿರ್ವಹಣೆ ಮಾಡುತ್ತಿದ್ದೆವು. ಆದರೆ ಇದೀಗ ಏಕಾಏಕಿ ಫುಟ್ಪಾತ್ ತೆರವು ಮಾಡಿರುವುದರಿಂದ ನಮಗೆ ದಿಕ್ಕೇ ತೋಚದಂತಾಗಿದೆ. ಅಂಗಡಿಗಳನ್ನು ತೆರವು ಮಾಡಿ 11 ದಿನಗಳು ಕಳೆಯುತ್ತಾ ಬಂದರೂ ಇಲ್ಲಿಯವರೆಗೆ ಪರ್ಯಾಯ ವ್ಯವಸ್ಥೆ ಮಾಡಿಲ್ಲ. ವ್ಯಾಪಾರ ಮಾಡಲು ನಮಗೆ ಸ್ಥಳ ನಿಗದಿಪಡಿಸಿಲ್ಲ. ಇದರಿಂದ ಜೀವನ ನಡೆಸುವುದೇ ಕಷ್ಟಕರವಾಗಿದೆ ಬೀದಿ ಬದಿ ವ್ಯಾಪಾರಿಗಳ ಸಂಘದ ತಾಲೂಕು ಅಧ್ಯಕ್ಷ ಲಕ್ಷ್ಮಣ ಚಾರಿ ತಮ್ಮ ಅಳಲನ್ನು ತೋಡಿಕೊಂಡರು.

ಬೀದಿಬದಿ ವ್ಯಾಪಾರಿ ಲೋಹಿತ್ ಕುಮಾರ್ ಮಾತನಾಡಿ, ಹೆಚ್ ಡಿ ಕೋಟೆ– ಮಾನಂದವಾಡಿ ರಸ್ತೆಗೆ ಹೊಂದಿಕೊಂಡಿರುವ ಯರಹಳ್ಳಿ ಗ್ರಾಮದ ಸರ್ವೇ ನಂ. 33 ರಲ್ಲಿ 36 ಗುಂಟೆ ಗುಂಡುತೋಪು ಸರ್ಕಾರಿ ಜಮೀನಿದ್ದು, ಇದು ಉಳ್ಳವರ ಪಾಲಾಗಿದೆ. ಅದೆಷ್ಟೋ ವರ್ಷಗಳಿಂದ ಆ ಜಾಗವನ್ನು ಬಿಟ್ಟುಕೊಡದೆ ಅಲ್ಲೇ ವಾಣಿಜ್ಯ ಚಟುವಟಿಕೆ ನಡೆಸುತ್ತಾ ಬರುತ್ತಿದ್ದಾರೆ. ಮೊದಲು ಇಲ್ಲಿ ಅಕ್ರಮವಾಗಿ ಕಟ್ಟಿರುವ ಕಟ್ಟಡ ತೆರವುಗೊಳಿಸಿ, ಬೀದಿ ಬದಿ ವ್ಯಾಪಾರಿಗಳಿಗೆ ಅನುಕೂಲವಾಗುವಂತೆ ಕಟ್ಟಡ ನಿರ್ಮಾಣ ಮಾಡಿಕೊಡುವ ಮೂಲಕ ಬೀದಿ ಬದಿ ವ್ಯಾಪಾರಿಗಳಿಗೆ ನೇರವಾಗಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ಸುರೇಶ್ ಅವರಿಗೆ ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಶ್ರೀ ಚಿಕ್ಕದೇವಮ್ಮ ಬೀದಿ ಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಲಕ್ಷ್ಮಣಾಚಾರಿ, ಕಾರ್ಯದರ್ಶಿ ಉಮೇಶ್, ಉಪಾಧ್ಯಕ್ಷೆ ನಾಗಮ್ಮ, ಖಜಾಂಚಿ ಶಿವಣ್ಣ, ಗೌರವ ಅಧ್ಯಕ್ಷ ಗೋಪಾಲ, ಕೇಶವ, ಲೋಹಿತ್ ಕುಮಾರ್ ವೈ ಬಿ. ಹೂ ಸ್ವಾಮಿ, ಮಾಯಮ್ಮ, ಪುಷ್ಪ, ರತ್ನಮ್ಮ, ಪುಷ್ಪ, ಪಾನಿಪುರಿ ಕುಮಾರ, ಬಸವರಾಜು ಗೋಬಿ, ಸುಂದರ್ ಗೋಬಿ, ವಾಟರ್ ಉಮೇಶ್, ಸುರೇಶ, ಜಯಪ್ರಕಾಶ್, ರಮೇಶ್, ಶಾಮಿಯಾನ ಮಲ್ಲಿಕಾರ್ಜುನ, ಹೆಚ್.ಪಿ ಲೋಕೇಶ್, ಪ್ರತಾಪ್, ಹೆಗ್ಗನೂರು ನಿಂಗರಾಜು, ಜೀವಿಕ ಬಸವರಾಜು, ಅನುಷಾ ಸೇರಿದಂತೆ ಅನೇಕ ಮಂದಿ ವ್ಯಾಪಾರಿಗಳು ಇದ್ದರು.

# ಇಂದು (ಆ.8) ಮಾದಾರ ಮಹಾಸಭಾ ಸಂಘ ಉದ್ಘಾಟನೆ

■ ಉದಯರಶ್ಮಿ ದಿನಪತ್ರಿಕೆ



ಎಚ್ ಡಿ ಕೋಟೆ: 8 ಆಗಸ್ಟ್ 2026 ರಂದು ಹೆಚ್ ಡಿ ಕೋಟೆ ಮತ್ತು ಸರಗೂರು ತಾಲೂಕು ಮಾದಾರ ಮಹಾಸಭಾ ತಾಲೂಕು ಘಟಕಗಳ ಉದ್ಘಾಟನೆ ಮತ್ತು ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಸರಗೂರು ಪಟ್ಟಣದ ಜಯಚಾಮರಾಜೇಂದ್ರ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ತಾಲೂಕು ಮಹಾಸಭಾದ ಅಧ್ಯಕ್ಷರಾದ ಪರಶಿವಮೂರ್ತಿ ಮನವಿ ಮಾಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪರಶಿವಮೂರ್ತಿ, ಚಿತ್ರದುರ್ಗ ಮಾದಾರ ಚೆನ್ನಯ್ಯ ಗುರುಪೀಠದ ಶ್ರೀ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯಸ್ವಾಮಿಗಳ ದಿವ್ಯಸಾನಿಧ್ಯದಲ್ಲಿ, ಹೆಚ್ ಡಿ ಕೋಟೆ ಕ್ಷೇತ್ರ ಶಾಸಕ ಅನಿಲ್ ಚಿಕ್ಕಮಾದು ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಕಾರ್ಯಕ್ರಮಕ್ಕೆ ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಕೆ.ಎಚ್ ಮುನಿಯಪ್ಪ, ಮಾಜಿ ಕೇಂದ್ರ ಸಚಿವ ಎ ನಾರಾಯಣಸ್ವಾಮಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಮಾಸ್ತಮ್ಮ ದೇವಸ್ಥಾನದಿಂದ ವೇದಿಕೆ ಕಾರ್ಯಕ್ರಮದವರೆಗೆ ಸಾಗಲಿರುವ ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ಮಾಜಿ ಸಚಿವ ಕೋಟೆ ಎಂ. ಶಿವಣ್ಣ, ವಿಧಾನ ಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ ಅವರು ಮಾದಾರ ಮಹಾಸಭಾ ಸಂಘ ಉದ್ಘಾಟಿಸಲಿದ್ದಾರೆ ಎಂದು ಹೇಳಿದರು.

ಸರಗೂರು ತಾಲೂಕು ಅಧ್ಯಕ್ಷ ಬೆಟ್ಟಸ್ವಾಮಿ ಮಾತನಾಡಿ, ಅವಳಿ ತಾಲೂಕಿನ ಮಾದಾರ ಮಹಾಸಭಾ ವತಿಯಿಂದ ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ, ಕ್ರೀಡಾಪಟುಗಳಿಗೆ, ಸಾಧಕರಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಂಡಿದ್ದು, ಲೋಕಸಭಾ ಸದಸ್ಯರಾದ ಸುನೀಲ್ ಬೋಸ್, ಮಾಜಿ ವಿಧಾನ ಪರಿಷತ್ ಸದಸ್ಯರಾದ ಸಿ ರಮೇಶ್, ಧರ್ಮಸೇನಾ ಸೇರಿದಂತೆ ಚುನಾಯಿತ ಪ್ರತಿನಿಧಿಗಳು ಆಗಮಿಸಲಿದ್ದಾರೆ. ಎರಡು ತಾಲೂಕಿನ ಸಮಾಜದ ಗಡಿಯಜಮಾನರು, ಮುಖಂಡರು, ವಿವಿಧ ಮಹಿಳಾ ಸಂಘಟನೆಗಳ ಸದಸ್ಯರು, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೆ ಸಹಕರಿಸಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಡಾ. ಬಾಬು ಜಗಜೀವನ್ ವಿಚಾರ ವೇದಿಕೆ ಮಾಜಿ ಅಧ್ಯಕ್ಷ ನಾಗರಾಜು, ತಾಲೂಕು ಮಾದಾರ ಮಹಾಸಭಾದ ಅಧ್ಯಕ್ಷರಾದ ಬೆಟ್ಟಸ್ವಾಮಿ, ಉಪಾಧ್ಯಕ್ಷರಾದ ಉಡನಾಗರಾಜು, ಶಿವರಾಜು, ಪ್ರಧಾನ ಕಾರ್ಯದರ್ಶಿ ಚೆಲುವರಾಜು, ನಿರ್ದೇಶಕರಾದ ಶಿವಯ್ಯ ಉಪಸ್ಥಿತರಿದ್ದರು.

# ಕನಸುಗಳ ಕಣಜ

■ ಉದಯರಶ್ಮಿ ದಿನಪತ್ರಿಕೆ

ಮನುಷ್ಯನ ಜೀವನವನ್ನು ಮುನ್ನಡೆಸುವ ಅತ್ಯಂತ ಪ್ರಭಾವಶಾಲಿ ಪ್ರೇರಣೆಯೇ ಕನಸು. ಕಣ್ಣು ಮುಚ್ಚಿದಾಗ ಕಾಣುವುದು ಕನಸಲ್ಲ, ಬದಲಾಗಿ ಕಣ್ಣು ತೆರೆದ ನಂತರವೂ ನಮ್ಮನ್ನ ನಿದ್ರಿಸದಂತೆ ಮಾಡುವ ಗುರಿಯೇ ನಿಜವಾದ ಕನಸು. ಪ್ರತಿಯೊಬ್ಬ ವ್ಯಕ್ತಿಯ ಹೃದಯದಲ್ಲಿ ಅನೇಕ ಕನಸುಗಳು ಅಡಗಿರುತ್ತವೆ. ಆ ಕನಸುಗಳೇ ಬದುಕಿಗೆ ದಿಕ್ಕು, ಧೈರ್ಯ ಮತ್ತು ಅರ್ಥವನ್ನು ನೀಡುತ್ತವೆ.

ಕನಸುಗಳು ಕೇವಲ ಕಲ್ಪನೆಗಳಾಗಿರಬಾರದು. ಅದರಲ್ಲಿ









ಪರಿಶ್ರಮ, ಶಿಸ್ತು, ಸಂಯಮ ಮತ್ತು ನಿರಂತರ ಪ್ರಯತ್ನದೊಂದಿಗೆ ಬೆರೆತಾಗ ಮಾತ್ರ ಸಾಧನೆಯ ಮೆಟ್ಟಿಲಾಗುತ್ತದೆ. ಎಷ್ಟೇ ಅಡೆತಡೆಗಳು ಬಂದರೂ ಕನಸಿನ ಮೇಲಿನ ನಂಬಿಕೆ ಕಳೆದುಕೊಳ್ಳದವರು ಅಂತಿಮವಾಗಿ ಯಶಸ್ಸಿನ ಶಿಖರವನ್ನೇರುತ್ತಾರೆ. ಇತಿಹಾಸದಲ್ಲಿರುವ ಎಲ್ಲ ಮಹಾನ್ ವ್ಯಕ್ತಿಗಳೆಲ್ಲರೂ ತಮ್ಮ ಕಾರ್ಯದ ಮೂಲಕ ಕನಸನ್ನು ಸಾಕಾರಗೊಳಿಸಿಕೊಂಡವರೇ.

ಪ್ರತಿಯೊಂದೂ ಕನಸಿನ ಹಿಂದೆ ಒಂದು ಹೊಣೆಗಾರಿಕೆ ಇರುತ್ತದೆ. ಸ್ವಂತ ಯಶಸ್ಸಿಗಾಗಿ ಅಲ್ಲ, ಸಮಾಜದ ಒಳಿತಿಗಾಗಿ ಕಂಡ ಕನಸುಗಳು ಇನ್ನಷ್ಟು ಮೌಲ್ಯಯುತವಾಗಿರುತ್ತವೆ. ಒಬ್ಬ ಯುವಕ ತನ್ನ ಕುಟುಂಬದ ಹಿತರಕ್ಷಣೆಗೆ ಕನಸು ಕಾಣಬಹುದು, ಒಬ್ಬ ಶಿಕ್ಷಕ ಉತ್ತಮ ವಿದ್ಯಾರ್ಥಿಗಳನ್ನು ರೂಪಿಸುವ ಕನಸು ಕಾಣಬಹುದು, ಒಬ್ಬ ರೈತ ಸಮೃದ್ಧ ಬೆಳೆಯ ಕನಸು ಕಾಣಬಹುದು. ಇಂತಹ ಕನಸುಗಳೇ ಸಮಾಜದ ಹಿತರಕ್ಷಣೆ ಮತ್ತು ಉತ್ತಮ ಸಮಾಜದ ಅಡಿಪಾಯವಾಗಿದೆ.

ಕನಸುಗಳ ಕಣಜ ಅಂದರೆ ಆಸೆಗಳ ಸಂಗ್ರಹವಲ್ಲ, ಅದು ಪರಿಶ್ರಮ, ಭರವಸೆ ಮತ್ತು ಆತ್ಮವಿಶ್ವಾಸದ ನಿಧಿ. ಕನಸುಗಳು ಎತ್ತರವಾಗಿದ್ದಷ್ಟು ನಮ್ಮ ಪ್ರಯತ್ನವೂ ದೃಢವಾಗಿರಬೇಕು. ಕನಸು ಕಾಣುವುದು ಮೊದಲ ಹೆಜ್ಜೆಯಾದರೆ ಅದನ್ನು ನನಸಾಗಿಸುವುದೇ ನಿಜವಾದ ಸಾಧನೆ.

ಪುಟ್ಟ ಕೆರೆಯಲ್ಲಿ ಸಾವಿರಾರು ಕಪ್ಪೆಗಳು ಜೀವಿಸುತ್ತಿದ್ದವು. ಅದರಲ್ಲಿ ಒಂದು ಕಪ್ಪೆಮರಿ

## ಭಾವರಶ್ಮಿ

ದಿನವೂ ಆಕಾಶದಲ್ಲಿ ಹಾರಾಡುವ ಹಕ್ಕಿಗಳನ್ನು ಕಂಡು ಅದಕ್ಕೂ ಹಾರಾಡಬೇಕೆಂಬ ಆಸೆಯಾಗುತ್ತಿತ್ತು. ಅದನ್ನು ತಿಳಿದ ಸಹ ಕಪ್ಪೆಗಳು ಅಪಹಾಸ್ಯ ಮಾಡುತ್ತಿದ್ದವು. ಆದರೂ ಪ್ರಯತ್ನ ಬಿಡದೇ ದಿನವೂ ಚಂಗನೆ ನೆಗೆನೆಗೆದು ಹಾರಲು ಯತ್ನಿಸುತ್ತಿತ್ತು. ಅದೆಷ್ಟೇ ನೆಗೆಯಲು ಹೋದರೂ ಅದರ ಪ್ರಯತ್ನ ವ್ಯರ್ಥವಾಗುತ್ತಿತ್ತು. ಇಷ್ಟಾದರೂ ಬಿಡದಿರೇ ಹಕ್ಕಿಗಳನ್ನು ಕಂಡು ನಲಿದಾಡಿ ದಿನವೂ ಅದರ ಹಾರಾಟದ ಕಸರತ್ತು ಸಾಗಿತ್ತು.

ಹೀಗಿರುವಾಗ ಒಂದು ದಿನ ಕೆರೆಯಲ್ಲಿ ಇದ್ದಕ್ಕಿಂದಂತೆ ಎಲ್ಲ ಕಪ್ಪೆಗಳು ಒತ್ತಟ್ಟಿಗೆ ಸೇರಿ ತಮ್ಮತಮ್ಮಲ್ಲೇ ಜೋರಾಗಿ ಮಾತಾಡುತ್ತಾ ಇರುವಾಗ ಈ ಮರಿ ಕಪ್ಪೆ "ವಿಷಯವೇನೆಂದು" ಕೇಳಿತು. ಅದಕ್ಕೆ ಹಿರಿಯ ಕಪ್ಪೆ "ನಮ್ಮ ಕೆರೆಗೆ ಹೊಸತಾಗಿ ಹಾವೊಂದು ಬಂದಿದೆ. ಈಗಾಗಲೇ ಮೀನುಗಳನ್ನು ನುಂಗಿದೆ. ನಮ್ಮ ಬಾರಿ ಯಾವಾಗಲೋ ಅಂತ ಹೆದರಿಕೆಯಾಗುತ್ತಿದೆ" ಅಂದಾಗ ಮರಿ ಕಪ್ಪೆ ಅಚಲ ಆತ್ಮವಿಶ್ವಾಸದಿಂದ "ನೀವೆಲ್ಲರೂ ನನ್ನ ಜೊತೆ ಸೇರಿ ಹಾರಲು ಪ್ರಯತ್ನಿಸಿ" ಅಂದಾಗ ಅವರೆಲ್ಲರ ಮೊಗದಲ್ಲಿ ಭಯ ಹೋಗಿ ಮಂದಹಾಸ ಮೂಡಿತು.

ಇಲ್ಲಿ ಮರಿಕಪ್ಪೆ ತನ್ನ ಹಾರುವ ಕನಸನ್ನು ಬದುಕಿಗೆ ಆಸರೆಯಾಗಿ, ತಮ್ಮವರ ಹಿತಕ್ಕಾಗಿ, ಪ್ರಾಣದ ಉಳಿವಿಗಾಗಿ ಬಳಸುವ ಯೋಚನೆ ಮಾಡಿರುವುದು ಅದರ ದಿನಂಪ್ರತಿಯ ಅವಿರತ ಅಭ್ಯಾಸ ಹಾಗೂ ಕನಸನ್ನು ನನಸು ಮಾಡುವುದರ ಕಡೆಗೆ ಕಪ್ಪೆಯ ಆತ್ಮವಿಶ್ವಾಸ. ಕನಸನ್ನು ಜೀವಿಸುವುದರ ಕಡೆಗೆ ವಾಲಿದ ಕಪ್ಪೆಯ ನಿಜವಾದ ಸಾಧನೆಯಾಗಿತ್ತು. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಹೃದಯದಲ್ಲಿರುವ ಕನಸುಗಳ ಕಣಜವನ್ನು ಕಾಪಾಡಿಕೊಳ್ಳಬೇಕು. ಅದಕ್ಕೆ ಪರಿಶ್ರಮದ ನೀರೆರೆದು ಆತ್ಮವಿಶ್ವಾಸದ ಬೆಳಕು ನೀಡಿ, ನಿರಂತರ ಪ್ರಯತ್ನದಿಂದ ಪೋಷಿಸಿದಾಗ ಮಾತ್ರ ಆ ಕನಸುಗಳು ಬದುಕಿನ ಸುಂದರ ವಾಸ್ತವವಾಗುತ್ತದೆ. ಕನಸುಗಳು ಬದುಕಿನ ಅಲಂಕಾರವಲ್ಲ, ಬದುಕಿನ ವಾಸ್ತವಗಳು.

ಲೇಖನ
– ಶೀತಲ್ ಹೆಗಡೆ.
ನಿರ್ವಾಹಕಿ
**'ನಮ್ಮ ಕಥಾ ಅರಮನೆ'**





# ಸ್ವಾತಂತ್ರ್ಯೋತ್ಸವ ಅರ್ಥಪೂರ್ಣ ಆಚರಣೆಗೆ ಕರೆ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ವಿವಿಧ ಇಲಾಖೆ, ಸಂಘ ಸಂಸ್ಥೆಗಳ ಸಹಯೋಗದೊಡನೆ ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚ-ರಿಸೋಣ ಎಂದು ತಹಶೀಲ್ದಾರ ನಿಂಗಣ್ಣ ಬಿರಾದಾರ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಜರುಗಿದ ಸ್ವಾತಂತ್ರ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸ್ವಾತಂತ್ರ್ಯೋತ್ಸವದ ಸಂಭ್ರಮದ ಆಚರಣೆಗೆ ಎಲ್ಲ ಇಲಾಖೆ, ಸಂಘ ಸಂಸ್ಥೆಗಳ ಸಹಕಾರ ಅಗತ್ಯ ಆದ್ದರಿಂದ ಸರ್ಕಾರದ ನಿರ್ದೇಶನ ಜೊತೆಗೆ ನಿಮ್ಮ ಸಲಹೆಗಳನ್ನು ಅನುಸರಿಸಿ ಆಚರಣೆ ಮಾಡೋಣ ಎಂದರು. ಸಭೆಯಲ್ಲಿ ನಿವೃತ್ತ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಕೆ.ಕುದರಿ, ರೈತಸಂಘದ ಸಿದ್ಧನಗೌಡ ಪಾಟೀಲ, ಅಜೀಜ್ ಯಲಗಾರ, ರೆಹಮಾನ್ ಕಣಕಾಲ್, ಕಾಶೀನಾಥ ತಳಕೇರಿ ಮಾತನಾಡಿದರು.ಸಭೆಯಲ್ಲಿ ವಿವಿಧ ಕ್ಷೇತ್ರದ ಸಾಧಕರ ಸನ್ಮಾನ, ಶಾಲಾ ಮಕ್ಕಳಿಗೆ ಉಪಹಾರದ ವ್ಯವಸ್ಥೆ, ಕಾರ್ಯಕ್ರಮ ಪೂರ್ಣ ಶಾಸಕರ ಉಪಸ್ಥಿತಿ, ಸರ್ಕಾರದ ನಡಾವಳಿ ಅನುಸಾರ ವೇದಿಕೆಯಲ್ಲಿ ಗಣ್ಯರ ಹಾಜರಾತಿ ಕುರಿತು ಚರ್ಚೆಗಳಾದವು.

ತಾಲ್ಲೂಕು ಪಂಚಾಯಿತಿ ಇಓ ಭಾರತಿ ಚೆಲುವಯ್ಯ, ಸಿಂದಗಿ ಬಿಇಓ ಟಿಎಸ್. ಆಲಗೂರ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಅಫ್ರೋಜ್ ಅಹ್ಮದ್ ಪಟೇಲ, ಅಕ್ಷರದಾಸೋಹ ಸಹಾಯಕ ನಿರ್ದೇಶಕ ಎ.ಎಸ್.ಡೋಣೂರ, ಉಪತಹಶೀಲ್ದಾರ ಸುರೇಶ ಮ್ಯಾಗೇರಿ, ಸರ್ಕಾರಿ ನೌಕರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಸಿ.ಬಿ.ಗಡಗಿ, ಡಾ.ರಾಮು ರಾಠೋಡ, ವಿಜಯಲಕ್ಷ್ಮಿ ನವಲಿ, ಚನ್ನಬಸು ಹೊಸಮನಿ, ಸಂಗಪ್ಪ ತಡವಲ್, ಎಸ್.ಎನ್.ಬಸವರೆಡ್ಡಿ, ಸಂಪತ್ ಜಮಾದಾರ, ಗುರುನಾಥ ಮುರುಡಿ, ಹಸನ್ ನದಾಫ್, ಮಲ್ಲು ಬಜಂತ್ರಿ ಹಾಗೂ ವಿವಿಧ ಸಂಘಟನೆ, ಇಲಾಖೆಗಳ ಸಿಬ್ಬಂದಿ ಇದ್ದರು.

# ಉಚಿತವಾಗಿ ಆರೋಗ್ಯ ಸೇವೆ ಒದಗಿಸುವ ಗುರಿ :ಕಟಕದೋಂಡ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಭಾರತ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾದ ಆಯುಷ್ಮಾನ್ ಆರೋಗ್ಯ ಮಂದಿರವು ಕೇವಲ ಚಿಕಿತ್ಸಾ ಕೇಂದ್ರವಲ್ಲ, ಬದಲಿಗೆ ತಡೆಗಟ್ಟುವಿಕೆ, ಉತ್ತೇಜ-ಕ, ಗುಣಪಡಿಸುವ, ಪುನರ್ವಸತಿ ಮತ್ತು ಉಪಶಮನಕಾರಿ ಸೇವೆಗಳನ್ನು ಒಳಗೊಂಡ ಒಂದು ಸಮಗ್ರ ಆರೋಗ್ಯ ಕೇಂದ್ರವಾಗಿದೆ. ದೇಶದ ಅಸ್ತಿತ್ವದಲ್ಲಿರುವ ಉಪ-ಆರೋಗ್ಯ ಕೇಂದ್ರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ, ಸಾರ್ವತ್ರಿಕವಾಗಿ ಉಚಿತ ಮತ್ತು ಸಮಗ್ರ ಪ್ರಾಥ-ಮಿಕ ಆರೋಗ್ಯ ಸೇವೆಯನ್ನು ಒದಗಿಸುವ ಗು-ರಿಯನ್ನು ಹೊಂದಿದೆ ಎಂದು ಶಾಸಕ ವಿಠ್ಠಲ ಕಟಕದೋಂಡರವರು ಹೇಳಿದರು.

ಶುಕ್ರವಾರದಂದು ರೇವತಗಾಂವ ಗ್ರಾಮದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜಿನಿಯ-ರಿಂಗ್ ಘಟಕದ ವತಿಯಿಂದ 15 ನೇ ಹಣಕಾಸಿನ ಆಯೋಗದಡಿಯಲ್ಲಿ ಆಯುಷ್ಮಾನ ಆರೋಗ್ಯ ಮಂದಿರ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು. ಈ ಕೇಂದ್ರಗಳು ಕೇವಲ ಕಾಯಿಲೆ ಗುಣಪಡಿಸುವುದಷ್ಟೇ ಅಲ್ಲದೆ, ತಾಯಿ-ಮಗುವಿನ ಆರೋಗ್ಯ, ಅಸಾಂಕ್ರಾಮಿಕ ರೋಗಗಳ ತಪಾಸಣೆ, ಮಾನಸಿಕ ಆರೋಗ್ಯ, ದಂತ, ಕಣ್ಣುಮತ್ತು ಕಿವಿ-ಮೂಗು-ಗಂಟಲು ಸಮಸ್ಯೆಗಳ ಜೊತೆಗೆ ಯೋಗ ಮತ್ತು ಆಯುಷ್ ಪದ್ಧತಿಗಳನ್ನು ಒಳಗೊಂಡ ಕ್ಷೇಮ ಕೇಂದ್ರಗಳಾಗಿ ಕಾರ್ಯನಿರ್ವಹಿಸುತ್ತೇವೆ. ತಡೆಗಟ್ಟುವಿಕೆ ಮತ್ತು ಪುನರ್ವಸತಿ ಆರೈಕೆಗೆ ಒತ್ತು ನೀಡುವ ಮೂಲಕ ಸಾರ್ವತ್ರಿಕ ಆರೋಗ್ಯ ರಕ್ಷಣೆಯನ್ನು ಸಾಧಿಸುವುದು ಈ ಯೋಜನೆಯ ಮುಖ್ಯ ಆಶಯವಾಗಿದೆ ಎಂದರು.

ಈ ವೇಳೆಯಲ್ಲಿ ಚಡಚಣ ಸಮುದಾಯ ಕೇಂದ್ರದ ಆಡಳಿತಾಧಿಕಾರಿಗಳಾದ ಡಾ. ಎ.ಎನ್. ಅಗರಖೇಡರವರು ಮಾತನಾಡುತ್ತ, ಆಯುಷ್ಮಾನ ಕೇಂದ್ರವು ಕೇವಲ ತಾಯಿ ಮತ್ತು ಮಗುವಿನ ಆರೋಗ್ಯಕ್ಕೆ ಸೀಮಿತವಾಗದೆ, ಮಧುಮೇಹ, ಅಧಿಕ ರಕ್ತದೊತ್ತಡದಂತಹ ಅಸಾಂಕ್ರಾಮಿಕ ರೋಗಗಳ ನಿರ್ವಹಣೆ, ಮೂಲಭೂತ ದಂತ ಚಿಕಿತ್ಸೆ, ಕಿವಿ ಮೂಗು-ಗಂಟಲು, ಕಣ್ಣಿನ ಆರೈಕೆ ಮತ್ತು ಮಾನಸಿಕ ಆರೋಗ್ಯ ಬೆಂಬಲದಂತಹ ವಿಸ್ತೃತ ಸೇವೆಗಳನ್ನು ಒಳಗೊಂಡಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಚಡಚಣ ಬ್ಲಾಕ್ ಕಾಂಗ್ರೇಸ ಅಧ್ಯಕ್ಷರಾದ ಆರ್.ಡಿ.ಹಕ್ಕೆ, ಗುತ್ತಿಗೆದಾರ ಐ.ಜಿ.ಬಿರಾದಾರ, ಗ್ರಾಪಂ ಪಿಡಿಓ ದೇವೇಂದ್ರ ವಾಗ್ಮೋಡೆ, ಕಾರ್ಯದರ್ಶಿ ಮಾದೇವ ಪೂಜಾರಿ, ಸುರೇಶ ಬಗಲಿ, ಅಡವೆಪ್ಪ ನಡಗೇರಿ, ಕಾಮೇಶ ಪಾಟೀಲ, ಮನೋಹರ ಹಿರೇಮಠ, ಶಿವಣ್ಣ ಪಾಂಡ್ರೆ, ನಾಗಪ್ಪ ನಂದಗೊಂಡೆ, ಸಮುದಾಯ ಆರೋಗ್ಯ ಅಧಿಕಾರಿ ಶ್ರೀಧರ ಬಂಡಗರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಬಿ.ತೇಲಿ, ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ಜಾನಪದ ಕಲೆಗಳ ಉಳಿವಿಗೆ ಯುವಜನತೆ ಮುಂದಾಗಲಿ :ಕಂಬಾಗಿ



■ ಉದಯರಶ್ಮಿ ದಿನಪತ್ರಿಕೆ

ಬಾಗಲಕೋಟೆ (ಜಮಖಂಡಿ): ಗ್ರಾಮೀಣ ಬದುಕಿನ ಸಂಸ್ಕೃತಿ, ಸಂಪ್ರದಾಯ ಮತ್ತು ಜೀವನ ಮೌಲ್ಯಗಳನ್ನು ಪ್ರತಿಬಿಂಬಿಸುವ ಜಾನಪದ ಕಲೆಗಳು ನಮ್ಮ ಸಾಂಸ್ಕೃತಿಕ ಪರಂಪರೆಯ ಅಮೂಲ್ಯ ಸಂಪತ್ತಾಗಿದ್ದು, ಅವುಗಳ ಸಂರಕ್ಷಣೆ ಹಾಗೂ ಬೆಳವಣಿಗೆಯಲ್ಲಿ ಯುವಜನತೆ ಪ್ರಮುಖ ಪಾತ್ರ ವಹಿಸಬೇಕು ಎಂದು ಸಮಾಜಮುಖಿ ಚಿಂತಕ ಕಂಬಾಗಿ ಸುರೇಶ್ ಕರೆ ನೀಡಿದರು.

ಜಮಖಂಡಿ ತಾಲೂಕಿನ ತುಬಚಿ ಗ್ರಾಮದಲ್ಲಿ ದುರ್ಗಾದೇವಿ ವಾರದ ಅಂಗವಾಗಿ ಆಯೋಜಿಸಲಾದ "ಗೀ ಗೀ ಪದ" ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆಧುನಿಕತೆಯ ವೇಗದಲ್ಲಿ ಅನೇಕ ಜಾನಪದ ಕಲಾಪ್ರಕಾರಗಳು ಮರೆಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಗ್ರಾಮೀಣ ಬದುಕಿನ ಅನುಭವ, ಜನಜೀವನದ ಮೌಲ್ಯಗಳು ಹಾಗೂ ಜನಪದ ಜ್ಞಾನವನ್ನು ಒಳಗೊಂಡಿರುವ ಇಂತಹ ಕಲಾಪ್ರಕಾರಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಜವಾಬ್ದಾರಿ ಸಮಾಜದ ಪ್ರತಿಯೊಬ್ಬರ ಮೇಲಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಾನಪದ ಗಾಯಕಿ ಪೂರ್ಣಿಮಾ ಹಂದಿಗುಂದ, "ಗೀ ಗೀ ಪದ" ಕೇವಲ ಮನರಂಜನೆಯ ಮಾಧ್ಯಮವಲ್ಲ. ಅದು ರೈತರ ಬದುಕು, ಸಾಮಾಜಿಕ ಕಳಕಳಿ, ಇತಿಹಾಸ ಹಾಗೂ ಜನರ ಭಾವನೆಗಳನ್ನು ಜೀವಂತವಾಗಿ ಕಟ್ಟಿಕೊಡುವ ಮೌಖಿಕ ಸಾಹಿತ್ಯದ ಅಪರೂಪದ ಪರಂಪರೆಯಾಗಿದೆ. ಇಂತಹ ಕಲೆಗಳನ್ನು ಉಳಿಸುವ ನಿಟ್ಟಿನಲ್ಲಿ ಗ್ರಾಮೀಣ ಮಟ್ಟದಲ್ಲಿ ನಿರಂತರ ಕಾರ್ಯಕ್ರಮಗಳು ನಡೆಯಬೇಕು ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಹಿರಿಯ ಗೀ ಗೀ ಪದ ಕಲಾವಿದರು ಹಾಗೂ ಜಾನಪದ ತಜ್ಞರನ್ನು ಶಾಲು ಹೊದಿಸಿ, ಸ್ಮರಣಿಕೆ ನೀಡಿ ಆತ್ಮೀಯವಾಗಿ ಸನ್ಮಾನಿಸಲಾಯಿತು. ಕಾರ್ಯಕ್ರಮವು ಜಾನಪದ ಗೀತೆಗಳು, ಗೀ ಗೀ ಪದಗಳ ಗಾಯನ ಹಾಗೂ ಗ್ರಾಮೀಣ ಸಾಂಸ್ಕೃತಿಕ ವೈಭವದ ಮೂಲಕ ನೆರೆದಿದ್ದ ಜನರ ಮನಸೂರೆಗೊಂಡಿತು.

ಕಾರ್ಯಕ್ರಮದಲ್ಲಿ ರಾವಾಸಾಬ ದಳವಾಯಿ, ಶಿವಲಿಂಗಪ್ಪ ಕುಂಬಾರ, ಕಂಬಾಗಿ ಸುರೇಶ್, ಪೂರ್ಣಿಮಾ ಹಂದಿಗುಂದ, ರಾಜು ಪಾಟೀಲ, ಗಣಪತಿ ಕೋತ, ಬಸವರಾಜ ತಳವಾರ, ಬಾಳುಗೌಡ ಪಾಟೀಲ, ಬಾಳು ಗುರವ, ಬಸಪ್ಪ ಬಾಲಪ್ಪನವರ, ಗ್ಯಾಂಗಯ್ಯ ಮಠದ, ಅಪ್ಪಾಸಾಬ ದಳವಾಯಿ, ರಾಜು ಕವಟಗಿ, ರಾವಸಾಬ ಪಾಟೀಲ, ರಾವಸಾಬ ಕುಂಬಾರ, ಈರಪ್ಪ ಬೋರ್ಯಾಳ, ಶಿವಲಿಂಗಪ್ಪ ಬಿರಾದಾರ, ಗುರಬಾಳು ಕಿತ್ತೂರು ಸೇರಿದಂತೆ ಅನೇಕ ಗಣ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕ್ರೀಡೆಗಳು ಆರೋಗ್ಯವನ್ನು ಕಾಪಾಡುವ ನಾಟಿ ಔಷಧಿ

## ಅರ್ಜನಾಳದಲ್ಲಿ ಲೋಣಿ (ಬಿ.ಕೆ.) ವಲಯದ ಪ್ರೌಢಶಾಲೆಗಳ ಕ್ರೀಡಾಕೂಟ ಉದ್ಘಾಟನೆ । ಬಿಇಒ ಎಚ್.ನಾಗೇಂದ್ರಪ್ಪ ಕರೆ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಕ್ರೀಡೆ ಕೇವಲ ಸ್ಪರ್ಧೆ ಅಥ-ವಾ ಮನರಂಜನೆಯ ಸಾಧನವಲ್ಲ; ಅದು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡುವ ನಾಟಿ ಔಷಧಿಯಾಗಿದೆ ಎಂದು ಚಡಚಣ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ನಾಗೇಂದ್ರಪ್ಪ ಅಭಿಪ್ರಾಯಪಟ್ಟರು.

ಇಂಡಿ ತಾಲೂಕಿನ ಚಡಚಣ ಶೈಕ್ಷಣಿಕ ವಲಯದ ಅರ್ಜನಾಳ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ 2026□27ನೇ ಶೈಕ್ಷಣಿಕ ಸಾಲಿನ ಲೋಣಿ (ಬಿ.ಕೆ.) ವಲಯದ ಪ್ರೌಢಶಾಲೆಗಳ ವಾರ್ಷಿಕ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಯಾಂತ್ರಿಕ ಜೀವನಶೈಲಿಯಲ್ಲಿ ಮಕ್ಕಳಿಂದ ಹಿಡಿದು ಯುವಜನತೆಯವರೆಗೆ ದೈಹಿಕ ಚಟುವಟಿಕೆಗಳು ಕಡಿಮೆಯಾಗುತ್ತಿವೆ. ಪ್ರತಿಯೊಬ್ಬರೂ ಪ್ರತಿದಿನ ಕನಿಷ್ಠ ಒಂದು ಗಂಟೆಯಾದರೂ ಕ್ರೀಡೆ ಅಥವಾ ಯೋಗ, ವ್ಯಾಯಾಮಕ್ಕೆ ಮೀಸಲಿಡಬೇಕು. ಇದ-ರಿಂದ ದೇಹ ಸದೃಢವಾಗುವುದರ ಜೊತೆಗೆ ಮನಸ್ಸಿಗೂ ಉಲ್ಲಾಸ ದೊರೆಯುತ್ತದೆ. ಕ್ರೀಡೆಯು ಶಿಸ್ತು, ಸಮಯಪ್ರಜ್ಞೆ, ನಾಯಕತ್ವ ಗುಣ, ಸಹಕಾರ ಮನೋಭಾವ ಹಾಗೂ ಆತ್ಮವಿಶ್ವಾಸವನ್ನು ಬೆಳೆಸುವ ಅತ್ಯುತ್ತಮ ಮಾಧ್ಯಮವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ-ಯಾಗಿ ಭಾಗವಹಿಸಿದ್ದ ಕಾಂಗ್ರೆಸ್ ಎಸ್‌ಸಿ/ಎಸ್‌ಟಿ ಘಟಕದ ರಾಜ್ಯ ಉಪಾಧ್ಯಕ್ಷ ಸಣ್ಣಪ್ಪ ತಳವಾರ ಮಾತನಾಡಿ, ಇಂದಿನ ಯುವಜನತೆ ಕೆಲವೊಂದು ದುಶ್ಚಟಗಳಿಗೆ ಬಲಿಯಾಗಿ ತಮ್ಮ ಅಮೂಲ್ಯ ಜೀವನವನ್ನು ಹಾಳು ಮಾಡಿಕೊಳ್ಳುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇಂತಹ ದುಶ್ಚಟಗಳಿಂದ ದೂರವಿದ್ದು ಕ್ರೀಡೆ, ವ್ಯಾಯಾಮ ಹಾಗೂ ಉತ್ತಮ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಯುವಕರು ಮುಂದಾಗಬೇಕು ಎಂದು ಕರೆ ನೀಡಿದರು.

ಕ್ರೀಡಾಕೂಟದಲ್ಲಿ ಲೋಣಿ (ಬಿ.ಕೆ.) ವಲಯದ 15 ಪ್ರೌಢಶಾಲೆಗಳ ವಿದ್ಯಾರ್ಥಿಗಳು ವಿವಿಧ ಅಥ್ಲೆಟಿಕ್ಸ್ ಹಾಗೂ ಕ್ರೀಡಾ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡರು. ಶಾಲಾ ಆವರಣದಲ್ಲಿ ಕ್ರೀಡಾ ಸಂಭ್ರಮ ಮನೆಮಾಡಿದ್ದು, ವಿದ್ಯಾರ್ಥಿಗಳಲ್ಲಿ ವಿಶೇಷ ಉತ್ಸಾಹ ಕಂಡುಬಂದಿತು.

ಈ ಸಂದರ್ಭದಲ್ಲಿ ಚಡಚಣ ಬಿಇಒ ಕಚೇರಿಯ ಶಿಕ್ಷಣ ಸಂಂ-ಯೋಜಕರಾದ ಸಿನಖೇಡ, ಭೂದಾನಿ ರತ್ನಾಕರ ತಳವಾರ, ಸುರೇಶ ನಾಯಕ, ಬಿಐಇಆರ್‌ಟಿ ಎಸ್.ಎಸ್. ಬೋರಗಿ, ಪ್ರಭು ಬಿರಾದಾರ, ಡಿ.ಕೆ. ರಗಟಿ, ಎಸ್‌ಡಿ-ಎಂಸಿ ಅಧ್ಯಕ್ಷರು ಹಾಗೂ ಸದಸ್ಯರು, ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಶಬ್ಬೀರ ಮುಲ್ಲಾ, ಅಭಿವೃದ್ಧಿ ಅಧಿಕಾರಿ ಲಕ್ಷ್ಮಣ ಪಾಟೀಲ್, ಗ್ರಾಮಸ್ಥರು, ಪಾಲಕರು, ಚಡಚಣ ಶೈಕ್ಷಣಿಕ ವಲಯದ 15 ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು, ಕ್ರೀಡಾ ಶಿಕ್ಷಕರು ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಂಘದ ಬೆಳವಣಿಗೆಯಲ್ಲಿ ಸದಸ್ಯರು, ಸಿಬ್ಬಂದಿ ಪಾತ್ರ ಅನನ್ಯ

■ ಉದಯರಶ್ಮಿ ದಿನಪತ್ರಿಕೆ




ದೇವರಹಿಪ್ಪರಗಿ: ಸಂಘದ ಸದಸ್ಯರು ಕಾನೂನು ಹಾಗೂ ನಿಯಮಗಳನ್ನು ಅರಿತು ವ್ಯವಹಾರದಲ್ಲಿ ಭಾಗವಹಿಸುವಂತಾಗಬೇಕು ಎಂದು ಹೊರ್ತಿ ಶಾಂತೇಶ್ವರ ವಿವಿದೋದ್ಧೇಶಗಳ ಸಹಕಾರಿ ಸಂಘದ ಗೌರವಾಧ್ಯಕ್ಷ ಎಂ.ಆರ್.ಪಾಟೀಲ ಹೇಳಿದರು.

ಪಟ್ಟಣದಲ್ಲಿ ಶುಕ್ರವಾರ ಜರುಗಿದ ಕೃಪಾ ವಿವಿಧೋದ್ದೇಶಗಳ ಸಹಕಾರಿ ಸಂಘದ 13ನೇ ವಾರ್ಷಿಕ ಸರ್ವ ಸಾಧಾರಣ ಸಭೆಯಲ್ಲಿ ಪಾಲ್ಗೊಂಡು, ದೀಪ ಬೆಳಗಿಸಿ ಮಾತನಾಡಿದರು.

ಸಹಕಾರ ಸಂಘಗಳಲ್ಲಿ ಇತ್ತೀಚೆಗೆ ಗಮನಾರ್ಹ ಬದಲಾವಣೆಗಳಾಗಿವೆ. ಇದನ್ನು ಸಂಘದ ಸದಸ್ಯರು ಅರಿಯಬೇಕಾಗಿದೆ ಎಂದರು.

ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಿನೋದ ಬಿರಾದಾರ ಮಾತನಾಡಿ, ಒಟ್ಟು 973 ಸದಸ್ಯ ಬಲದ ಸಂಘವು 3.00 ಲಕ್ಷ ಶೇರು ಬಂಡವಾಳದೊಂದಿಗೆ ಕಾರ್ಯಾರಂಭ ಮಾಡಿ ಈಗ 88.62 ಲಕ್ಷ ಶೇರು ಬಂಡವಾಳದೊಂದಿಗೆ ಸುಮಾರು 1319.77 ಲಕ್ಷ ದುಡಿಯುವ ಬಂಡವಾಳ ಹೊಂದಿದೆ. 2025-26ನೇ ಸಾಲಿನಲ್ಲಿ 5061.06 ಲಕ್ಷ ವ್ಯವಹಾರ ನಡೆಸಿ 21.69 ಲಕ್ಷ ರೂ.ಗಳ ನಿವ್ವಳ ಆದಾಯ ಗಳಿಸಿದೆ. ಮುಂಬರುವ ವರ್ಷಗಳಲ್ಲಿ ಠೇವುಗಳನ್ನು ರೂ. 1300.00 ಲಕ್ಷಗಳಿಗೆ ಹೆಚ್ಚಿಸಿಕೊಳ್ಳುವುದು. ಶೇರು ಬಂಡವಾಳವನ್ನು ರೂ.90.00 ಲಕ್ಷಗಳಿಗೆ ಹೆಚ್ಚಿಸಿಕೊಳ್ಳುವುದು. ಹಾಗೂ ದುಡಿಯುವ ಬಂಡವಾಳವನ್ನು ರೂ. 1500.00 ಲಕ್ಷಗಳಿಗೆ ಹೆಚ್ಚಿಸುವ ಗುರಿ ಹೊಂದಲಾಗಿದೆ ಎಂದರು.

ಸಂಘದ ಅಧ್ಯಕ್ಷ ಬಿ.ಆರ್.ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘದ ಬೆಳವಣಿಗೆಯಲ್ಲಿ ಸರ್ವಸದಸ್ಯರು ಹಾಗೂ ಸಿಬ್ಬಂದಿ ಗಮನಾರ್ಹ ಪಾತ್ರ ವಹಿಸಿದ್ದಾರೆ ಎಂದರು.

ಎಸ್.ಎಚ್.ನಾಡಗೌಡ, ಬಿ.ಸಿ.ಉಪ್ಪಿನ, ವಿ.ವೈ.ಪಾಟೀಲ ಮಾತನಾಡಿ ಸಂಘ ಮುಂದಿನ ದಿನಗಳಲ್ಲಿ ಉತ್ತರೋತ್ತರವಾಗಿ ಬೆಳೆದು ಎಲ್ಲರಿಗೂ ನೆರಳು ನೀಡುವ ಹೆಮ್ಮರವಾಗಲಿ ಎಂದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ತೋರಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಉಪಾಧ್ಯಕ್ಷ ಶಿವರಾಯ ಚವ್ಹಾಣ, ಸಂಸ್ಥಾಪಕ ಸೋಮನಗೌಡ ಪಾಟೀಲ, ನಿರ್ದೇಶಕರುಗಳಾದ ಕೆ.ಎ.ಸಾಲಕ್ಕಿ, ಆರ್.ಎಸ್.ಮಠ, ಎ.ಎಸ್.ಪಾಟೀಲ, ಎಮ್.ಎಸ್.ಕಕ್ಕಳಮೇಲಿ, ಪರಮಪ್ಪ ಚೌಧರಿ, ಎಮ್.ಕೆ.ಕುಂಬಾರ, ಜೆ.ಎಲ್.ಸುಗತೇಕರ, ಎಸ್.ಆರ್. ಹಚಡದ, ವಿ.ಆರ್.ಯಲಗೂರ ಸಿಬ್ಬಂದಿ ಅರುಣ ಮಣೂರ, ಪ್ರವೀಣ ಅಂಗಡಿ, ಪ್ರತೀಕ ಬಿರಾದಾರ, ರವಿ ವಡ್ಡೋಡಗಿ, ಬಸವರಾಜ ದೊಡ್ಡಮನಿ, ಲಿಖಿತ ಜಾಧವ ಹಾಗೂ ಸದಸ್ಯರು ಇದ್ದರು.

# ಕಲಕೇರಿಯಲ್ಲಿ ಹೆಚ್‌ಐವಿ ಏಡ್ಸ್ ಕುರಿತ ಜಾಗೃತಿ ಕಾರ್ಯಕ್ರಮ

# ‘ಬ್ರೇಕ್ ಫ್ರೀ ಇಂಡಿಯಾ’ ಸ್ಕ್ಯಾನ್ ಮಾಡಿ ಆರೋಗ್ಯ ಸ್ಥಿತಿ ತಿಳಿಯಿರಿ

■ ಉದಯರಶ್ಮಿ ದಿನಪತ್ರಿಕೆ



ಕಲಕೇರಿ: ಇಂದಿನ ವೈಜ್ಞಾನಿಕ ಮತ್ತು ತಂತ್ರಜ್ಞಾನದ ಯುಗದಲ್ಲಿ ಸಮಾಜದ ಸ್ವಾಸ್ಥ್ಯ ಕಾಪಾಡುವ ದೃಷ್ಟಿಯಿಂದ ಆರೋಗ್ಯ ಇಲಾಖೆಯು ಜಾರಿಗೆ ತಂದಿರುವ ಯೋಜನೆಗಳನ್ನು ಪ್ರತಿಯೊಬ್ಬರೂ ಸದುಪಯೋಗ ಪಡಿಸಿಕೊಳ್ಳುವ ಮೂಲಕ ವಿಶೇಷವಾಗಿ ಯುವಕ ಯುವತಿಯರು ಆರೋಗ್ಯ ಇಲಾಖೆಯ ಸ್ಕ್ಯಾನರ್ ಬಳಸಿ ತಮ್ಮ ಆರೋಗ್ಯದ ಸ್ಥಿತಿಗತಿಯನ್ನು ತಾವೇ ಸ್ವಯಂ ದೃಢೀಕರಿಸಿಕೊಳ್ಳುವ ಮತ್ತು ಅವಶ್ಯಕ ಆರೋಗ್ಯ ಸೇವೆ ಹಾಗೂ ಪರಿಹಾರ ಪಡೆಯುವ ಅವಕಾಶವಿದ್ದು ಇದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕಲಕೇರಿಯ ಸಮುದಾಯ ಆರೋಗ್ಯ ಕೇಂದ್ರ ಆಪ್ತ ಸಮಾಲೋಚಕರಾದ ಡಾ. ಸಂತೋಷ ಟೆಂಗಳಿ ಹೇಳಿದರು.

ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕದ ಮಾರ್ಗದರ್ಶನದಲ್ಲಿ ಸಮುದಾಯ ಆರೋಗ್ಯ ಕೇಂದ್ರ ಮತ್ತು ಆದರ್ಶ ಪ್ರಥಮದರ್ಜೆ ಕಲಾ ಮತ್ತು ವಿಜ್ಞಾನ ಕಾಲೇಜಿನ ಸಹಯೋಗದಲ್ಲಿ ನಡೆದ ಊಖಗಿ/೦ಖಆಖ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಊಖಗಿ/೦ಖಆಖ ಹರಡುವಿಕೆ, ತಡೆಗಟ್ಟುವ ಕ್ರಮಗಳು, ಊಖಗಿ ಪರೀಕ್ಷೆ, ಚಿಕಿತ್ಸೆ ಹಾಗೂ ೦ಖಖ ಸೇವೆಗಳ ಹಾಗೂ ‘ಬ್ರೇಕ್ ಫ್ರೀ ಇಂಡಿಯಾ’ ಕಿಖ ಅಠಜಜ ಸ್ಕ್ಯಾನ್ ಮಾಡುವ ಮೂಲಕ ಊಖಗಿ/೦ಖಆಖ ಹಾಗೂ ಲೈಂಗಿಕ ಆರೋಗ್ಯಕ್ಕೆ ಸಂಬಂಧಿಸಿದ ವಿಶ್ವಾಸಾರ್ಹ ಮಾಹಿತಿಯನ್ನು ಸುಲಭವಾಗಿ ಪಡೆಯಬಹುದು ಮತ್ತು ಊಖಗಿ ಸೋಂಕಿತ ವ್ಯಕ್ತಿಗಳೊಂದಿಗೆ ಯಾವುದೇ ರೀತಿಯ ತಾರತಮ್ಯ ಮಾಡದೆ, ಅವ-ರಿಗೆ ಬೆಂಬಲ ಮತ್ತು ಗೌರವ ನೀಡಬೇಕು, “ಜ್ಞಾನವೇ ಊಖಗಿ/೦ಖಆಖ ತಡೆಗಟ್ಟುವ ಪ್ರಮುಖ ಶಕ್ತಿಸರಿಯಾದ ಮಾಹಿತಿ ಪಡೆಯಿರಿ, ತಪ್ಪು ಕಲ್ಪನೆಗಳನ್ನು ತೊಡೆದುಹಾಕಿರಿ.” ಎಂದರು. ಆರ್‌ಕೆಎಸ್‌ಕೆ ಆಪ್ತ ಸಮಾಲೋಚಕರಾದ ಅಪ್ಪಾಸಾಬ ಮಾಂಗ ಅವರು ಹದಿಹರೆಯದವರ ಆರೋಗ್ಯ ಮತ್ತು ಅದರಿಂದಾಗುವ ಸಮಸ್ಯೆಗಳು ಮತ್ತು ಮುಟ್ಟಿನ, ಲೈಂಗಿಕ ಮತ್ತು ಸಂತಾನೋತ್ಪತ್ತಿ, ಆರೋಗ್ಯದ ಕುರಿತು ಸಲಹೆ ನೀಡಿ “ಹಲೋ ಮೈತ್ರಿ” ಆರೋಗ್ಯ ಸಹಾಯವಾಣಿಯ ಉದ್ದೇಶ, ಉಪಯೋಗ ಮತ್ತು ಲಭ್ಯವಿರುವ ಆರೋಗ್ಯ ಸೇವೆಗಳ ಕುರಿತು ವಿಶೇಷವಾಗಿ ಕಿಶೋರಾವಸ್ಥೆಯಲ್ಲಿನ ದೈಹಿಕ ಹಾಗೂ ಮಾನಸಿಕ ಆರೋಗ್ಯ ಸಮಸ್ಯೆಗಳು, ವೈಯಕ್ತಿಕ ಸ್ವಚ್ಛತೆ, ಪೌಷ್ಟಿಕ ಆಹಾರ, ಮಾಸಿಕ ಋತುಚಕ್ರದ ಆರೋಗ್ಯ, ಮಾನಸಿಕ ಒತ್ತಡ ಹಾಗೂ ಆರೋಗ್ಯ ಸಂಬಂಧಿತ ಅನುಮಾನಗಳ ಕುರಿತು ಸೂಕ್ತ ಮಾರ್ಗದರ್ಶನ ಪಡೆಯುವ ಕುರಿತು ಹಲ್ಲೋ ಮೈತ್ರಿ ಸಹಾಯವಾಣಿ ಸಂಖ್ಯೆ 0804-7104-234 ಗೆ ಹೇಗೆ ಕರೆಮಾಡಿ ಮಾತನಾಡಬೇಕು ಎಂದು ತಿಳಿಸಿ ವಿದ್ಯಾರ್ಥಿಗಳೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಹಲವು ಪ್ರಶ್ನೆಗಳಿಗೆ ಸೂಕ್ತ ಪರಿಹಾರ ಮತ್ತು ಮಾರ್ಗದರ್ಶನ ನೀಡಿದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಎಸ್.ಎಮ್.ಸಜ್ಜನ ಅವರು ವಿದ್ಯಾರ್ಥಿಗಳು ತಮ್ಮ ಆರೋಗ್ಯ ಸಮಸ್ಯೆಗಳು ಮತ್ತು ಸಂದೇಹಗಳನ್ನು ಮುಕ್ತವಾಗಿ ಹಂಚಿಕೊಳ್ಳುವಂತೆ ಹಾಗೂ ಅಗತ್ಯವಿದ್ದಲ್ಲಿ ಸೂಕ್ತ ಆರೋಗ್ಯ ಸೇವೆ ಮತ್ತು ಸಲಹೆಯನ್ನು ಪಡೆಯುವ ಮೂಲಕ ಆರೋಗ್ಯದ ಬಗ್ಗೆ ತಪ್ಪು ಕಲ್ಪನೆಗಳನ್ನು ದೂರ ಮಾಡಿ, ವೈಜ್ಞಾನಿಕ ಮಾಹಿತಿಯನ್ನು ಆಧರಿಸಿ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.


ಪಿಯು ಕಾಲೇಜಿನ ಪ್ರಾಚಾರ್ಯರಾದ ಅಜಯ್ ಬರಗಾಲಿ, ಪ್ಯಾರಾಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಎಚ್.ಎ.ಮೋಮಿನ, ಉಪನ್ಯಾಸಕರಾದ ಆಬೀದ ಸಾಲೋಡಗಿ, ರುಕ್ಸಾನಾಬೇಗಂ ಹಿಪ್ಪರಗಿ, ಸಂಗೀತಾ ಟೆಂಗಳಿ, ಸದ್ದಾಮ್ ಬಡೇಘರ, ವಿನೋದ ನಂದಿಮಠ, ಮಲ್ಲಿಕಾರ್ಜುನ ಸಜ್ಜನ, ನಬಿಲಾಲ ದೊಡಮನಿ ಸೇರಿದಂತೆ ಇತರರು ಇದ್ದರು.

# ಚೆಕ್ ಬೌನ್ಸ್ ಪ್ರಕರಣ: 2.10 ಲಕ್ಷ ದಂಡ-ಜೈಲು ಶಿಕ್ಷೆ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಸಾಲದ ಹಣ-ಕ್ಕೆ ನೀಡಿದ್ದ ಚೆಕ್, ಬೌನ್ಸ್ ಆದ ಪ್ರಕರಣದಲ್ಲಿ ಆರೋಪಿಯನ್ನು ದೋಷಿ ಎಂದು ಘೋಷಿಸಿ ಇಲ್ಲಿನ ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶರಾದ ರಾಮಮೂರ್ತಿ ಎನ್ ಅವರು ಮಹತ್ವದ ತೀರ್ಪು ನೀಡಿದ್ದಾರೆ. ತಾಳಿಕೋಟೆ ನಿವಾಸಿ ರವಿಚಂದ್ರ ಬಿರಾದಾರ ಅವರ ಪರವಾಗಿ ಎನ್.ಜಿ.ಕುಲಕರ್ಣಿ ವಕೀಲರು ಸಲ್ಲಿಸಿದ್ದ ಖಾಸಗಿ ದೂರಿನ ವಿಚಾರಣೆ ನಡೆಸಿದ ನ್ಯಾಯಾಲಯ, ಆರೋಪಿ ಸಂಗಮೇಶ್ ಅಲಿಯಾಸ್ ಸಂಗು ದೇಸಾಯಿ ವಿರುದ್ಧದ ಆರೋಪ ಸಾಬೀತಾಗಿದೆ ಎಂದು ತೀರ್ಮಾನಿಸಿತು. ದೂರಿನ ಪ್ರಕಾರ, ಆರೋಪಿ 2018ರಲ್ಲಿ 2 ಲಕ್ಷ ಕೈ ಸಾಲ ಪಡೆದು, ಅದರ ಮರುಪಾವತಿಗಾಗಿ ನೀಡಿದ್ದ ಚೆಕ್ ಬ್ಯಾಂಕ್‌ನಲ್ಲಿ "ಈಣಟಿಜ ಖಟಿಣಜಿಜಿಛಿಜಟಿಣ" ಕಾರಣದಿಂದ ಅಮಾನ್ಯಗೊಂಡಿತ್ತು. ಬಳಿಕ ಕಾನೂನು ನೋಟಿಸ್ ನೀಡಿದರೂ ಹಣ ಪಾವತಿಸದ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು.

ಅಂತಿಮವಾಗಿ, ನೆಗೋಶಿಯಬಲ್ ಇನ್ಸುಮೆಂಟ್ಸ್ ಕಾಯ್ದೆಯ ಕಲಂ 138ರಡಿ ಆರೋಪಿಯನ್ನು ದೋಷಿ ಎಂದು ಘೋಷಿಸಿದ ನ್ಯಾಯಾಲಯ, 2,10,000 ದಂಡ ವಿಧಿಸಿದೆ. ಅದರಲ್ಲಿ 5,000 ಸರ್ಕಾರಕ್ಕೆ ದಂಡವಾಗಿ ಹಾಗೂ ಉಳಿದ 2,05,000ನ್ನು ದೂರುದಾರರಿಗೆ ಪರಿಹಾರವಾಗಿ ನೀಡುವಂತೆ ಆದೇಶಿಸಿದೆ. ದಂಡ ಪಾವತಿಸಲು ವಿಫಲವಾದರೆ 6 ತಿಂಗಳ ಸರಳ ಕಾರಾಗೃಹ ಶಿಕ್ಷೆ ಅನುಭವಿಸಬೇಕೆಂದು ನ್ಯಾಯಾಲಯ ತಿಳಿಸಿದೆ.




**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR